# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 295 | Volume - 01 Issue - 295 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | Title- Code: KARKAN 28269 | ಚಿತ್ರದುರ್ಗ | Chitradurga | ದಿನಾಂಕ: 15–06–2024 ಶನಿವಾರ | Date: 15-06-2024 Saturday | ಪುಟ: 4 | Page: 4 | ಬೆಲೆ : ರೂ.2–00 | Price: Rs. 2-00



**ಒಳಪುಟದ ಸುದ್ದಿಗಳು**

ನಿಯಮಿತ ಯೋಗ ಆರೋಗ್ಯಕ್ಕೆ ಸಹಕಾರಿ: ಮಹಾದೇವಿ ಮರಕಟ್ಟಿ 2

ದೇವರ ಎತ್ತುಗಳ ನಿರ್ವಹಣೆಗೆ ಟ್ರಸ್ಟ್ ರಚನೆಗೆ ಪ್ರೇರೇಪಿಸಿ: ಎಡಿಸಿ 3

ಜಲಜೀವನ್ ಮಿಷನ್ 8 ಕಾಮಗಾರಿಗಳಿಗೆ ಸಮಿತಿ ಅನುಮೋದನೆ 4



ಸುದ್ದಿ, ಜಾಹಿರಾತಿಗೆ 9686622252


**ಶುಭ ನುಡಿ**

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

# ಜಿಲ್ಲೆಯಲ್ಲಿ ಕಲುಷಿತ ನೀರು ಸೇವನೆ ಅವಘಡ ಸಂಭವಿಸಿದಂತೆ ಎಚ್ಚರಿಕೆಯಿಂದ ಕ್ರಮ ವಹಿಸಿ

## ಕುಡಿಯುವ ನೀರು ಪ್ರಗತಿ ಪರಿಶೀಲನಾ ಸಭೆಯಲ್ಲಿ ಜಿ.ಪಂ ಸಿಇಒ ಎಸ್.ಜೆ.ಸೋಮಶೇಖರ್ ಸೂಚನೆ

» ಚಿತ್ರದುರ್ಗ

ಜಿಲ್ಲೆಯಲ್ಲಿ ಕಲುಷಿತ ನೀರು ಸೇವನೆಯಂತಹ ಯಾವುದೇ ಅಹಿತಕರ ಅವಘಡ ಸಂಭವಿಸಿದಂತೆ ಮುಂಜಾಗ್ರತಾ ಕ್ರಮವಾಗಿ ಎಲ್ಲ ಅಗತ್ಯ ಎಚ್ಚರಿಕಾ ಕ್ರಮಗಳನ್ನು ವಹಿಸಬೇಕು. ಯಾವುದೇ ಕಾರಣಕ್ಕೂ ಕಲುಷಿತ ನೀರಿನ ಸೇವನೆಯಿಂದ ಸಾವುಂಟಾಗುವ ಪ್ರಕರಣಗಳು ಜರುಗಬಾರದು ಎಂದು ಜಿಲ್ಲಾ ಪಂಚಾಯಿತಿ ಸಿಇಒ ಎಸ್.ಜೆ.ಸೋಮಶೇಖರ್ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ಕುಡಿಯುವ ನೀರಿನ ಸಂಬಂಧದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಗ್ರಾಮ, ಜನವಸತಿ ಪ್ರದೇಶಗಳಲ್ಲಿ ಬರುವ ಕುಡಿಯುವ ನೀರಿನ ಪೂರೈಕೆ ವ್ಯವಸ್ಥೆಯಡಿಯಲ್ಲಿ ಬರುವ ಎಲ್ಲಾ ಪೈಪ್‌ಲೈನ್‌ಗಳನ್ನು ಪ್ರತಿದಿನವೂ ಕಣ್ಗಾವಲು ನಡೆಸಿ, ಯಾವುದಾದರೂ ಪೈಪ್‌ಲೈನ್‌ಗಳು ಹಾನಿಯಾಗಿರುವುದು ಕಂಡುಬಂದರೆ ಕೂಡಲೇ ದುರಸ್ಥಿ ಕಾರ್ಯ ಕೈಗೊಂಡು ಯಾವುದೇ ಕಲುಷಿತ ನೀರು ಕುಡಿಯುವ ನೀರಿನೊಂದಿಗೆ ಸೇರದಂತೆ ಕ್ರಮವಹಿಸಬೇಕು ಎಂದು ಸೂಚನೆ ನೀಡಿದರು.ನೀರು ಸರಬರಾಜು ವ್ಯವಸ್ಥೆಯಲ್ಲಿ ಬರುವ ಎಲ್ಲಾ ನೀರು ಶೇಖರಣಾ ಘಟಕಗಳನ್ನು ಕಾಲ–ಕಾಲಕ್ಕೆ ಸ್ವಚ್ಛಗೊಳಿಸಿ ಪ್ರತಿ ಹಂತದಲ್ಲಿಯೂ ಕ್ಲೋರಿನೇಷನ್ ಮಾಡಬೇಕು. ಮುಂದಿನ ಒಂದುವಾರದೊಳಗೆಜಿಲ್ಲೆಯಎಲ್ಲಾಓವರ್ ಹೆಡ್ ಟ್ಯಾಂಕ್‌ಗಳನ್ನು ಸ್ವಚ್ಛಗೊಳಿಸಬೇಕು. ನೀರಿನ ಮೂಲಗಳಾದ ಕೊಳವೆಬಾವಿಗಳ ಸುತ್ತಮುತ್ತಲೂ ಯಾವುದೇ ಕಲುಷಿತ ನೀರು ಅಥವಾ ಚರಂಡಿ ನೀರು ನಿಲ್ಲದಂತೆ ಹಾಗೂ ಕೊಳಚೆ ನೀರು ಸರಾಗವಾಗಿ ಹರಿಯಲು ಸೂಕ್ತ ಚರಂಡಿ ವ್ಯವಸ್ಥೆಯನ್ನು ಕೈಗೊಂಡು ಆ ನೀರಿನ ಮೂಲದ ಸುತ್ತಲೂ ಕಾಂಕ್ರಿಟ್‌ನಿಂದ ಕಟ್ಟೆ ಕಟ್ಟಬೇಕು ಎಂದು ತಿಳಿಸಿದರು.ಜಿಲ್ಲಾ ಮತ್ತು ತಾಲ್ಲೂಕು ಪ್ರಯೋಗಾಲಯಗಳ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಕುಡಿಯುವ ನೀರಿನ ಮೂಲಗಳ ಗುಣಮಟ್ಟದ ಪರೀಕ್ಷೆಗಳನ್ನು ಮಳೆಗಾಲದ ಮುನ್ನ ಮತ್ತು ಮಳೆಗಾಲದ ನಂತರ ಕಡ್ಡಾಯವಾಗಿ ಹಾಗೂ ಅವಶ್ಯಕವಿದ್ದಾಗ ಪರೀಕ್ಷೆಗಳನ್ನು ಕೈಗೊಳ್ಳಬೇಕು. ಕಲುಷಿತ ಎಂದು ಕಂಡುಬರುವ ನೀರಿನ ಮೂಲಗಳಿಗೆ ಪರ್ಯಾಯವಾಗಿ ಶುದ್ಧ ಕುಡಿಯುವ ನೀರನ್ನು ಒದಗಿಸಲು ಕೂಡಲೇ ಕ್ರಮಕೈಗೊಳ್ಳಬೇಕು ಎಂದು ಸೂಚಿಸಿದರು.

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯಡಿಯಲ್ಲಿ ಸ್ಥಾಪಿಸಲಾಗಿರುವ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಕುಡಿಯುವ ನೀರಿನ ಗುಣಮಟ್ಟ ಪರೀಕ್ಷಾ ಪ್ರಯೋಗಾಲಯಗಳ ಪ್ರಗತಿ ಪರಿಶೀಲನೆಯನ್ನು ಮಾಸಿಕವಾಗಿ ಕೈಗೊಳ್ಳುವಂತೆ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ತಾಕೀತು ಮಾಡಿದರು.

ಒಂದು ವೇಳೆ ನೀರು ಕಲುಷಿತ ಎಂದು ಕಂಡುಬಂದರೆ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ತಾ.ಪಂ ಇಒ ಮತ್ತು ತಾಲ್ಲೂಕು ಆರೋಗ್ಯ ಅಧಿಕಾರಿಗಳ ತಂಡ ಸ್ಥಳ ಪರೀಕ್ಷೆ ನಡೆಸಿ, ಕೂಡಲೇ ಆ ನೀರಿನ ಮೂಲಗಳಿಂದ ಸರಬರಾಜು ಮಾಡುವ ವ್ಯವಸ್ಥೆಯನ್ನು ಸಂಪೂರ್ಣವಾಗಿ ನಿಲ್ಲಿಸಿ, ಪರ್ಯಾಯ ಮೂಲಗಳಿಂದ ಕುಡಿಯುವ ನೀರನ್ನು ಸರಬರಾಜು ಮಾಡಲು ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಕಲುಷಿತ ನೀರಿನ ಸೇವನೆಯ ಅವಘಡಗಳನ್ನು ತಪ್ಪಿಸುವ ನಿಟ್ಟಿನಲ್ಲಿ ವಿವಿಧ ಇಲಾಖೆ ಅಧಿಕಾರಿಗಳು ಸಮನ್ವಯದಿಂದ ಹಾಗೂ ತಂಡವಾಗಿ ಕಾರ್ಯನಿರ್ವಹಿಸುವಂತೆ ಅಧಿಕಾರಿಗಳಿಗೆ ಸಲಹೆ ನೀಡಿದರು.



ಪುಟ 2

**ಫಾಸ್ಟ್ ನ್ಯೂಸ್**

### ಆದರ್ಶ ವಿದ್ಯಾಲಯ ದಾಖಲಾತಿ: ಜೂ.24ಕ್ಕೆ ಪರೀಕ್ಷೆ ಮುಂದೂಡಿಕೆ

» ಚಿತ್ರದುರ್ಗ

2024–25ನೇ ಸಾಲಿನ ಆದರ್ಶ ವಿದ್ಯಾಲಯ ಚಳ್ಳಕೆರೆ, ಮೊಳಕಾಲ್ಮೂರು ತಾಲ್ಲೂಕುಗಳಲ್ಲಿನ 7,8,9 ನೇ ತರಗತಿಗಳಲ್ಲಿ ಖಾಲಿ ಇರುವ ಸೀಟುಗಳನ್ನು ಭರ್ತಿ ಮಾಡಲು ನಡೆಸುವ ಪ್ರವೇಶ ಪರೀಕ್ಷೆಯನ್ನು ಜೂನ್ 24ಕ್ಕೆ ಮುಂದೂಡಲಾಗಿದೆ. ಸಮಗ್ರ ಶಿಕ್ಷಣ ಕರ್ನಾಟಕ ರಾಜ್ಯ ಯೋಜನಾ ನಿರ್ದೇಶಕರ ಸೂಚನೆಯಂತೆ ಆದರ್ಶ ವಿದ್ಯಾಲಯ 7,8,9 ನೇ ತರಗತಿಗಳ ಪ್ರವೇಶ ಪರೀಕ್ಷೆಯನ್ನು ಜೂನ್ 20ರಂದು ಪರೀಕ್ಷೆ ನಡೆಸುವಂತೆ ಸೂಚಿಸಲಾಗಿತ್ತು. ಆದರೆ ಇದೇ ವೇಳಾ ಪಟ್ಟಿಯಂತೆ ಎಸ್.ಎಸ್.ಎಲ್.ಸಿ –2 ಪರೀಕ್ಷೆ ನಡೆಯುತ್ತಿರುವ ಕಾರಣದಿಂದ ಇದೇ ತಿಂಗಳ ಜೂನ್24ರಂದು ಪರೀಕ್ಷೆ ನಡೆಸಲು ನಿರ್ಣಯಿಸಿದೆ. ಪರಿಷ್ಕೃತ ಪರೀಕ್ಷಾ ದಿನಾಂಕದಂತೆ ತಾಲ್ಲೂಕಿನಲ್ಲಿ ಪರೀಕ್ಷೆಗೆ ಹಾಜರಾಗುವಂತೆ ವಿದ್ಯಾರ್ಥಿ, ಪೋಷಕರಿಗೆ ಕೋರಿದೆ. ಹೆಚ್ಚಿನ ಮಾಹಿತಿಗಾಗಿ ಡಿಡಿಪಿಐ (ಆಡಳಿತ) ಅಭಿವೃದ್ಧಿ, ಬಿ.ಇ.ಓ, ಬಿ.ಆರ್.ಸಿ ಚಳ್ಳಕೆರೆ, ಮೊಳಕಾಲ್ಮೂರು ತಾಲ್ಲೂಕು ಆದರ್ಶ ವಿದ್ಯಾಲಯ ಮುಖ್ಯ ಶಿಕ್ಷಕರನ್ನು ಸಂಪರ್ಕಿಸಬಹುದು ಎಂದು ಡಯಟ್ ಉಪನಿರ್ದೇಶಕ ಎಂ.ನಾಸಿರುದ್ದೀನ್ ತಿಳಿಸಿದ್ದಾರೆ.

### ಆಡಳಿತ ನ್ಯಾಯಾಧೀಕರಣ ತರಬೇತಿ: ಪರಿಶಿಷ್ಟ ಜಾತಿಯ ಕಾನೂನು ಪದವೀಧರರಿಂದ ಅರ್ಜಿ

» ಚಿತ್ರದುರ್ಗ

2024–25 ನೇ ಸಾಲಿಗೆ ಆಡಳಿತ ನ್ಯಾಯಾಧೀಕರಣದಲ್ಲಿ ತರಬೇತಿ ನೀಡಲು ಪರಿಶಿಷ್ಟ ಜಾತಿಯ ಕಾನೂನು ಪದವೀಧರರನ್ನು ಆಯ್ಕೆ ಮಾಡಲು, ಪರಿಶಿಷ್ಟ ಜಾತಿಯ ಅರ್ಹ ಕಾನೂನು ಪದವೀಧರರಿಂದ ಅರ್ಜಿ ಆಹ್ವಾನಿಸಲಾಗಿದೆ ಆಸಕ್ತ ಅಭ್ಯರ್ಥಿಗಳು www.sw.kar.nic.in ತಂತ್ರಾಂಶದಲ್ಲಿ ಇದೇ ಜೂನ್ 18 ರಿಂದ ಅರ್ಜಿ ಸಲ್ಲಿಸಬಹುದು. ಜುಲೈ 31 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಷರತ್ತುಗಳು: ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಅರ್ಜಿ ಸಲ್ಲಿಕೆಯ ದಿನಾಂಕಕ್ಕೆ ಕಾನೂನು ಪದವಿಯನ್ನು ಪಡೆದು 2 ವರ್ಷ ಮೀರಿರಬಾರದು. ಅರ್ಜಿ ಸಲ್ಲಿಕೆಯ ಕೊನೆಯ ದಿನಾಂಕಕ್ಕೆ ಅಭ್ಯರ್ಥಿಯ ವಯಸ್ಸು 40 ವರ್ಷ ಮೀರಿರಬಾರದು. ತರಬೇತಿಯನ್ನು ಜಿಲ್ಲೆಯಲ್ಲಿಯೇ ಪಡೆದಿರಬೇಕು. ತರಬೇತಿಗೆ ಆಯ್ಕೆ ಮಾಡಲಾದ ಅಭ್ಯರ್ಥಿಗಳಿಗೆ ತರಬೇತಿ ಅವಧಿಯಲ್ಲಿ ರೂ.10,000 ಶಿಷ್ಯ ವೇತನ ನೀಡಲಾಗುವುದು. ಆಯ್ಕೆಯಾದ ಅಭ್ಯರ್ಥಿಗಳು ಜಿಲ್ಲಾ ಪಬ್ಲಿಕ್ ಪ್ರಾಸಿಕ್ಯೂಟರ್, ಸರ್ಕಾರಿ ವಕೀಲರು ಅಥವಾ 20 ವರ್ಷಗಳ ಕಾಲ ಕಡಿಮೆ ಇಲ್ಲದ ವಕೀಲ ವೃತ್ತಿಯಲ್ಲಿ ಸೇವೆ ಸಲ್ಲಿಸುತ್ತಿರುವ ನ್ಯಾಯವಾದಿಗಳ ಬಳಿ ತರಬೇತಿ ಪಡೆಯುತ್ತಿದ್ದೀರಿ ಎಂದು ಲಿಖಿತ ರೂಪದಲ್ಲಿ ತಿಳಿಸಿರಬೇಕು. ತರಬೇತಿ ಅವಧಿಯು 2 ವರ್ಷವಿದ್ದು ಮದ್ಯದಲ್ಲಿ ಬಿಡುವುದಿಲ್ಲ ಎಂದು ಅಥವಾ ಒಂದು ವೇಳೆ ಬಿಟ್ಟರೆ ತರಬೇತಿ ಅವಧಿಯಲ್ಲಿ ಪಡೆದ ಶಿಷ್ಯ ವೇತನವನ್ನು ಶೇ.10 ರಷ್ಟು ಬಡ್ಡಿಯೊಂದಿಗೆ ಸರ್ಕಾರಕ್ಕೆ ಮರುಪಾವತಿ ಮಾಡುವುದಾಗಿ ಮುಚ್ಚಳಿಕೆ ಬರೆದು ಕೊಡಬೇಕು. ಈ ನಿಯಮ ರಾಜ್ಯ ಮತ್ತು ಕೇಂದ್ರ ಸರ್ಕಾರದಲ್ಲಿ ಕೆಲಸ ಮಾಡುತ್ತಿದ್ದರೆ ಅನ್ವಯಿಸುವುದಿಲ್ಲ. ಆಯ್ಕೆಯಾದ ಅಭ್ಯರ್ಥಿಗಳು ಸುಳ್ಳು ಮಾಹಿತಿ ಸುಳ್ಳು ದಾಖಲೆಗಳನ್ನು ನೀಡಿ ಆಯ್ಕೆಯಾಗಿ ಶಿಷ್ಯ ವೇತನ ಪಡೆದರೆ, ಅಂತಹ ಅಭ್ಯರ್ಥಿಗಳು ತರಬೇತಿ ಅವಧಿಯಲ್ಲಿ ಪಡೆದ ಶಿಷ್ಯ ವೇತನ ಒಟ್ಟಿಗೆ 10% ರ ಬಡ್ಡಿಯೊಂದಿಗೆ ಸರ್ಕಾರಕ್ಕೆ ಹಿಂದಿರುಗಿಸಬೇಕು. ತಪ್ಪಿದರೆ ಭೂ ಕಂದಾಯ ಬಾಕಿ ವಸೂಲಿಯಂತೆ ವಸೂಲಿ ಮಾಡಲಾಗುತ್ತದೆ. ಸಂದರ್ಶನ ನಡೆಯುವ ಸ್ಥಳ ಮತ್ತು ದಿನಾಂಕವನ್ನು ಅಂಚೆಯ ಮೂಲಕ ತಿಳಿಸಲಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ ಸಮಾಜ ಕಲ್ಯಾಣ ಇಲಾಖೆಯನ್ನು ಸಂಪರ್ಕಿಸಬಹುದು.





ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯವತಿಯಿಂದ ನೀಡುವಂತ ಗೌರವ ಡಿ.ಲಿಟ್ ಪುರಸ್ಕಾರಕ್ಕೆ ಚಿತ್ರದುರ್ಗದ ಮಾದಾರ ಚನ್ನಯ್ಯ ಗುರುಪೀಠದ ಶ್ರೀ ಬಸವಮೂರ್ತಿ ಮಾದಾರ ಚೆನ್ನಯ್ಯ ಸ್ವಾಮೀಜಿ ಪಾತ್ರರಾಗಿದ್ದು, ಬೆಂಗಳೂರಿನ ಸರ್ ಪುಟ್ಟಣ್ಣಚೆಟ್ಟಿ ಪುರಭವನದಲ್ಲಿ ನಡೆದ ಹತ್ತನೆಯ ಹಾಗೂ ಹನ್ನೊಂದನೆಯ ದೀಕ್ಷಾಂತ ಘಟಿಕೋತ್ಸವದಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು ಸ್ವಾಮೀಜಿಯವರಿಗೆ 2021–22ನೇ ಸಾಲಿನ ಗೌರವ ಡಿ.ಲಿಟ್ ಪದವಿಯನ್ನು ಪ್ರಧಾನ ಮಾಡಿದರು.

## ಎಸ್‌ಎಸ್‌ಎಲ್‌ಸಿ ಮರುಪರೀಕ್ಷೆ ಆರಂಭ ಮೊದಲ ದಿನವೇ 122 ವಿದ್ಯಾರ್ಥಿಗಳು ಗೈರು

» ಚಳ್ಳಕೆರೆ

ಪ್ರಸ್ತುತ ವರ್ಷದ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ತೇರ್ಗಡೆಯಾಗದ ವಿದ್ಯಾರ್ಥಿಗಳಿಗೆ ಪ್ರೌಢ ಶಿಕ್ಷಣಾ ಮಂಡಳಿ ಮರುಪರೀಕ್ಷೆಗೆ ಆದೇಶ ನೀಡಿದ್ದು, ಜೂನ್14ರಿಂದ ಪರೀಕ್ಷೆ ಆರಂಭಗೊಂಡಿವೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ತಿಳಿಸಿದರು.

ಅವರು, ಈ ಬಗ್ಗೆ ಮಾಹಿತಿ ನೀಡಿ ಪ್ರಸ್ತುತ ವರ್ಷದ ಎಸ್‌ಎಸ್‌ಎಲ್‌ಸಿ ಮರುಪರೀಕ್ಷೆಗೆ 1383 ವಿದ್ಯಾರ್ಥಿಗಳು ಆರ್ಹರಿದ್ದು, ಮೊದಲ ದಿನದ ಕನ್ನಡ ಪರೀಕ್ಷೆಗೆ ಸಂಬಂಧಪಟ್ಟಂತೆ 762 ವಿದ್ಯಾರ್ಥಿಗಳು ಆರ್ಹತೆ ಪಡೆದಿದ್ದು ಆಪೈಕಿ 640 ವಿದ್ಯಾರ್ಥಿಗಳು ಮಾತ್ರ ಹಾಜರಾಗಿ ಉಳಿದ 122 ವಿದ್ಯಾರ್ಥಿಗಳು ಗೈರು ಹಾಜರಾಗಿರುತ್ತಾರೆ. ನಗರದ ಐದು ಪರೀಕ್ಷಾ ಕೇಂದ್ರಗಳಲ್ಲಿ ಎಸ್‌ಎಸ್‌ಎಲ್‌ಸಿ ಮರು ಪರೀಕ್ಷೆಗಳು ನಡೆದಿದ್ದು, ಎಲ್ಲೆಡೆ ಶಾಂತಿಯುತವಾಗಿ ಪರೀಕ್ಷೆಗಳ ಕಾರ್ಯ ನಡೆದಿದೆ ಎಂದು ಅವರು ಮಾಹಿತಿ ನೀಡಿದರು.



**ಪ್ರಮುಖ ಸುದ್ದಿ**

# ರೇಷ್ಮೆ ಕೃಷಿಯಲ್ಲಿ ಖುಷಿ ಕಾಣುತ್ತಿರುವ ಸಹೋದರರು

» ನಾಗತಿಹಳ್ಳಿಮಂಜುನಾಥ್

ಹೊಸದುರ್ಗ: ಬಿರು ಬಿಸಿಲಿ ತಾಪದಿಂದ ಈಗಷ್ಟೆ ಹೊರಬಂದಿದ್ದೇವೆ ಆದರೆ ಕಳೆದ ಸಾಕಷ್ಟು ತಿಂಗಳಾನುಗಟ್ಟಲೆ ನೆತ್ತಿ ಸುಡುವಷ್ಟು ಬಿಸಿಲಿನ ತಾಪ ದಿನದಿಂದ ದಿನಕ್ಕೆ ಏರಿಕೆ ಆಗುತ್ತಿರುವ್ಯದರಿಂದ ರೇಷ್ಮೆ ಬೆಳೆಯನ್ನು ಆರೈಕೆ ಮಾಡಿ ಉಳಿಸಿಕೊಳ್ಳುವುದು ಸವಾಲಿನ ಕೆಲಸವಾಗಿತ್ತು, ಗರಿಷ್ಠ ಉಷ್ಣಾಂಶ ಕಂಡು ಬರುತ್ತಿರುವ ಹಿನ್ನಲೆಯಲ್ಲಿ ರೇಷ್ಮೆ ಸಾಕಾಣೆಗೆ ಬೇಕಾದ ತಾಪಮಾನವನ್ನು ಸರಿದೂಗಿಸುವುದು ಸವಾಲಿನ ಕೆಲಸ. ಮಳೆ ಕೊರತೆ, ಬಿಸಿಲು ಝಳ, ನೀರಿನ ಕೊರತೆ ನಡುವೆ ಮಳೆಯೇ ಇಲ್ಲದ ದಿನ ಮಾನಗಳಲ್ಲಿ ಸಹೋದರರಿಬ್ಬರು ರೇಷ್ಮೆ ಕೃಷಿಯಲ್ಲಿ ಖುಷಿ ಕಾಣುತ್ತಿದ್ದಾರೆ ಎಂದರೆ ಅದು ಅಷ್ಟು ಸುಲಭದ ಮಾತಲ್ಲಾ,ಹರ ಸಾಹಸ ಪಟ್ಟು ರೇಷ್ಮೆ ಕೃಷಿಯನ್ನ ಹಾರೈಕೆ ಮಾಡುತ್ತಿರುವುದು ನಿಜಕ್ಕೂ ಸಾಹಸದ ಕೆಲಸವೇ ಸರಿ.

ಬೆಂಗಳೂರಿನಲ್ಲಿ ಕೆಲ ತಿಂಗಳ ಕಾಲ ಸೆಲ್ಸ್ ಮ್ಯಾನ್ ಆಗಿ ಕೆಲಸ ನಿರ್ವಹಿಸಿ ಅದರಿಂದ ಸುಖ ಕಾಣದೆ ಮತ್ತೆ ತಮ್ಮ ಊರಾದ ಹೊಸದುರ್ಗ ತಾಲೂಕಿನ ಮೈಲಾರಪುರ ಗ್ರಾಮಕ್ಕೆ ಬಂದ ಮಲ್ಲೇಶ್ ಮತ್ತು ಓಂಕಾರಮೂರ್ತಿ ಎಂಬ ಸಹೋದರರು ರೇಷ್ಮೆ ಬೆಳೆಯನ್ನು ಬದುಕಿನ ಉದ್ಯೋಗವನ್ನಾಗಿ ಮಾಡಿಕೊಂಡು ಇಂದು ನೆಮ್ಮದಿಯ ಜೀವನವನ್ನು ನಡೆಸುತ್ತಿರುವ ಸಾಧಕ ಯುವ ರೈತರಾಗಿದ್ದಾರೆ.





15 ವರ್ಷಗಳ ಹಿಂದೆ ಬೆಂಗಳೂರಿನಿಂದ ಬಂದ ನಂತರ ಸಂಬಂದಿಯೊಬ್ಬರು ರೇಷ್ಮೆ ಬೆಳೆದಿರುವುದನ್ನು ನೋಡಿದ ಮಲ್ಲೇಶ್ ಮತ್ತು ಓಂಕಾರಮೂರ್ತಿ ಸಹೋದರರು ತಾವು ರೇಷ್ಮೆ ಕೃಷಿ ಮಾಡಬೇಕು ಅಂದು ಕೊಂಡಾಗ ಆರ್ಥಿಕ ಸಮಸ್ಯೆ ಎದುರಾಯಿತು. ಸಾಲ ಮಾಡಿ ಕೊಳವೆ ಬಾಯಿ ಕೊರೆಸಿದರು.ಆರಂಭದಲ್ಲಿ ಅರ್ಧ ಎಕರೆಯಲ್ಲಿ ರೇಷ್ಮೆ ಬೆಳೆದರು. ನಿರೀಕ್ಷಿತ ಫಲ ದೊರೆದಿದ್ದರಿಂದ ಪ್ರೋತ್ಸಾಹ ದೊರೆತು ತಾಂತ್ರಿಕತೆಯನ್ನು ಪಡೆದು ಕೊಂಡು ಉತ್ತಮ ಇಳುವರಿ ಪಡೆದರು. ಅಲ್ಲಿಂದಾಚೆಗೆ ರೇಷ್ಮೆಅ ವರ ಬದುಕಿನ ಲಹರಿಯನ್ನೇ ಬದಲಾಯಿಸಿದೆ.

**ನಮ್ಮಜನ ವಿಶೇಷ**

14 ಎಕರೆ ಜಮೀನಿನಲ್ಲಿ ನಾಲ್ಕು ಎಕರೆಯಲ್ಲಿ ರೇಷ್ಮೆ (ಹಿಪ್ಪು ನೇರಳೆ ಸೊಪ್ಪು) ಬೆಳೆದು ಹುಳು ಸಾಕಾಣಿಕೆಯಲ್ಲಿ ತೊಡಗಿದ್ದಾರೆ. ಉಳಿದ ಎಕರೆಯಲ್ಲಿ ಸಿರಿಧಾನ್ಯ, ರಾಗಿ ಬೆಳೆಯುತ್ತಿದ್ದಾರೆ. ಇಡೀ ವರ್ಷ ಬೆಳೆ ಬರುವ ಹಾಗೆ ಎರಡು ಪ್ಲಾಟ್‌ಗಳಾಗಿ ಮಾಡಿಕೊಂಡು ಮೂರು ತಿಂಗಳ ಅವಧಿಯಲ್ಲಿ ಎರಡನ್ನೂ ಬೆಳೆಯುತ್ತಿದ್ದಾರೆ. ಪ್ರತಿ ಬೆಳೆಯ ನಂತರ 15 ದಿನಗಳ ಬಿಡುವು ಬಿಟ್ಟರೆ ಇಡೀ ವರ್ಷ ಇವರ ತೋಟದಲ್ಲಿ ರೇಷ್ಮೆ ಹುಳುಗಳು ಗೂಡು ಕಟ್ಟಿರುತ್ತವೆ. ಪ್ರತಿ ಬೆಳೆಗೆ ಸರಾಸರಿ 3 ಕ್ವಿಂಟಾಲ್ ರೇಷ್ಮೆ ಗೂಡುಗಳನ್ನು ಮಾರಾಟ ಮಾಡುತ್ತಾ ವರ್ಷಕ್ಕೆ ಖರ್ಚು ಕಳೆದು 10 ಲಕ್ಷ ರೂಪಾಯಿಯಷ್ಟು ಗರಿಷ್ಟ ಆದಾಯ ಪಡೆಯುತ್ತಿದ್ದು, ಸಂಪೂರ್ಣ ಸಾವಯವ ಕೃಷಿಯಲ್ಲಿ ಬದುಕು ಕಟ್ಟಿಕೊಂಡಿದ್ದಾರೆ.

ಬಿತ್ತನೆಗೂಡು: ಕೇಂದ್ರೀಯ ರೇಷ್ಮೆ ಮಂಡಳಿಯಲ್ಲಿ ಸದಸ್ಯತ್ವ ಹೊಂದಿರುವ ಮಲ್ಲೇಶ್ ಎಫ್‌ಸಿ1 ಮತ್ತು ಎಫ್‌ಸಿ 2 ಬಿತ್ತನೆಗೂಡು ಬೆಳೆದು ಕೇಂದ್ರಿಯರೇಷ್ಮೆ ಮಂಡಳಿಗೆ ನಿಗತ ಬೆಲೆಗೆ ಮಾರಾಟ ಮಾಡುತ್ತಾರೆ. ಎಫ್‌ಸಿ 1 ಮತ್ತು ಎಫ್‌ಸಿ 2 ಬಿತ್ತನೆಗೂಡು ಬೆಳೆಯುವುದು ಕಷ್ಟಕರವಾಗಿದ್ದು, ತಾಂತ್ರಿಕತೆ ಬಳಸಿಕೊಂಡು ಎಫ್‌ಸಿ 1 ಮತ್ತು 2 ಬಿತ್ತನೆಗೂಡು ಬೆಳೆಯುತ್ತಿದ್ದಾರೆ.

ಸಮಗ್ರ ಕೃಷಿ: ಜಮೀನಿನಲ್ಲಿಇರುವ ಮೂರು ಕೊಳವೆಬಾವಿಗಳಲ್ಲಿ ನೀರು ಲಭ್ಯವಿದೆ. 200 ತೆಂಗು ಮರಳಿಂದ ವರ್ಷಕ್ಕೆ 10 ರಿಂದ 15 ಸಾವಿರ ಇಳುವರಿ ಬರುತ್ತವೆ. ಅದನ್ನುಕೊಬ್ಬರಿ ಮಾಡಿ ಮಾರಾಟ ಮಾಡುವುದರಿಂದ ವಾರ್ಷಿಕ 2 ಲಕ್ಷರೂಆದಾಯ ಬರುತ್ತದೆ. ಹೈನುಗಾರಿಕೆಯಿಂದ ಸಿಗುವ ಗೊಬ್ಬರವನ್ನುರೇಷ್ಮೆಗೆ ಬಳಸಲಾಗುತ್ತಿದೆ. ಫಲಕ್ಕೆ ಬಂದಿರುವ 200 ಅಡಿಕೆ ಹಾಗೂ ಹೊಸದಾಗಿ 500 ಅಡಿಕೆ ಸಸಿ ಹಾಕಲಾಗಿದೆ.ಇದರಜೊತೆಗೆ ಸಿರಿಧಾನ್ಯ, ರಾಗಿ ಬೆಳೆಯಲಾಗುತ್ತಿದೆ. ಮನೆಯಲ್ಲಿಎರಡುಎಮ್ಮೆ, ಹಸು ಇದ್ದು, ದಿನಕ್ಕೆ ಆರು ಲೀಟರ್ ಹಾಲು ನೀಡುತ್ತಿದ್ದು, ಹೈನು ಗಾರಿಕೆಯಿಂದಲೂ ಆದಾಯ ಪಡೆಯುತ್ತಿದೆ ಈ ಕುಟುಂಬ.

ಪುಟ 2



## ಫಾಸ್ಟ್ ನ್ಯೂಸ್

### ರೇಷ್ಮೆ ಕೃಷಿಯಲ್ಲಿ ಖುಷಿ ಕಾಣುತ್ತಿರುವ ಸಹೋದರರು

» ಮೊದಲ ಪುಟದಿಂದ

ಕೊಳವೆಬಾವಿ:ಮೈಲಾರಪುರ ಗ್ರಾಮದ ಗೇಟ್ ಬಳಿ ಇರುವ ನಾಲ್ಕು ಎಕರೆ ಜಮೀನಿನಲ್ಲಿ ಕೊರೆಸಲಾದ ಕೊಳವೆಬಾವಿಗಳು ಫೈಲ್ ಆಗಿವೆ. ಆದರೂ ಛಲ ಬಿಡದೆ ಗ್ರಾಮದಲ್ಲಿರುವ ಜಮೀನಿನ ಮೂಲಕ ಪೈಪ್ ಲೈನ್ ಮುಖಾಂತರ ರೇಷ್ಮೆ ಕೃಷಿಗೆ ನೀರು ಒದಗಿಸಿ ರೇಷ್ಮೆ ಬೆಳೆಯುತ್ತಿದ್ದಾರೆ. ರೇಷ್ಮೆ ಹುಳುಗಳಿಗೆ ಬರುವ ಹಾಲುರೋಗ, ಸಪ್ಪೆರೋಗ ಹಾಗೂ ಸುಣ್ಣಕಟ್ಟು ರೋಗಗಳನ್ನು ನಿಯಂತ್ರಣ ಮಾಡಿದರೆ ಬಂಪರ್ ಬೆಳೆ ಬೆಳೆಯಲು ಸಾಧ್ಯವಿದೆ. ಸಣ್ಣರೈತರುಕುಟುಂಬದ ಸದಸ್ಯರ ನೆರವಿನೊಂದಿಗೆ ಲಾಭದಾಯಕರೇಷ್ಮೆ ಕೃಷಿ ಮಾಡಲು ಸಾಧ್ಯವಿದೆ. ರೇಷ್ಮೆ ಬೆಳೆಯಲ್ಲಿ ಲಾಭವಿದೆ ಎನ್ನುತ್ತಾರೆ ರೈತ ಮಲ್ಲೇಶ್.

### ಕಲುಷಿತ ನೀರು ಸೇವನೆ ಅವಘಡ ಸಂಭವಿಸಿದಂತೆ ಎಚ್ಚರಿಕೆಯಿಂದ ಕ್ರಮ ವಹಿಸಿ: ಸಿಇಓ

» ಮೊದಲ ಪುಟದಿಂದ

ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಕೆ.ತಿಮ್ಮಪ್ಪ ಮಾತನಾಡಿ, ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕುಡಿಯುವ ನೀರಿನ ಸರಬರಾಜು ವಿತರಣೆ ವ್ಯವಸ್ಥೆಯ ಸಂಪೂರ್ಣ ತಪಾಸಣೆ ಹಾಗೂ ಪರಿಶೀಲನೆ ಮಾಡುವುದು ಹಾಗೂ ನೀರು ಕಲುಷಿತಗೊಳ್ಳುವ ಮೂಲಗಳ ಬಿಂದುಗಳನ್ನು ಗುರುತಿಸಬೇಕು. ಗ್ರಾಮ ಪಂಚಾಯಿತಿಗಳು ಬ್ಲೀಚಿಂಗ್ ಪೌಡರ್‌ಗಳು ಸಾಕಷ್ಟು ದಾಸ್ತಾನುಗಳನ್ನು ಇರಿಸಿಕೊಳ್ಳಬೇಕು ಮತ್ತು ಬಳಸುವಿಕೆಯ ವಿಧಾನಗಳಿಗನುಸಾರ ಉಪಯೋಗಿಸಬೇಕು. ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ತಾಲ್ಲೂಕು ಆರೋಗ್ಯಾಧಿಕಾರಿಗಳು ಗ್ರಾಮ ಪಂಚಾಯಿತಿಗಳಲ್ಲಿ ಆಶಾ ಕಾರ್ಯಕರ್ತರು, ಗ್ರಾಮ ಪಂಚಾಯಿತಿಗಳ ಪಂಪ್ ಆಪರೇಟರ್‌ಗಳು, ಗ್ರಾಮಪಂಚಾಯಿತಿ ಸಿಬ್ಬಂದಿಗಳಿಗೆ ಅಗತ್ಯ ತರಬೇತಿ ನೀಡಬೇಕು ಎಂದು ತಿಳಿಸಿದರು.

ಜಿಲ್ಲೆಯ ಜನರಿಗೆ ಶುದ್ಧ ಕುಡಿಯುವ ನೀರು ಒದಗಿಸುವ ಜತೆಗೆ ಕಾಯಿಸಿ ಆರಿಸಿದ ನೀರನ್ನು ಕುಡಿಯುವಂತೆ ಜನರಿಗೆ ತಿಳುವಳಿಕೆ ಮೂಡಿಸಬೇಕು ಎಂದು ಹೇಳಿದರು.

**ಸ್ವಚ್ಛತಾ ಅಭಿಯಾನ ಅಚ್ಚುಕಟ್ಟಾಗಿರಲಿ:** ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ಸುರಕ್ಷಿತ ಕುಡಿಯುವ ನೀರು ಬಳಕೆ ಕುರಿತಂತೆ ಈಗಾಗಲೇ ಜೂನ್ 11 ರಿಂದ ಸ್ವಚ್ಛತಾ ಅಭಿಯಾನ ಪ್ರಾರಂಭವಾಗಿದ್ದು, ಒಂದು ವಾರಗಳ ಕಾಲ ನಡೆಯುವ ಸ್ವಚ್ಛತಾ ಅಭಿಯಾನವನ್ನು ಅಚ್ಚುಕಟ್ಟಾಗಿ ಆಯೋಜಿಸಬೇಕು ಎಂದು ಜಿ.ಪಂ ಸಿಇಒ ಎಸ್.ಜೆ.ಸೋಮಶೇಖರ್ ಸೂಚನೆ ನೀಡಿದರು. ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಕೈಗೊಂಡ ಸ್ವಚ್ಛತಾ ಅಭಿಯಾನ ಕಾರ್ಯಕ್ರಮದ ಛಾಯಾಚಿತ್ರಗಳೊಂದಿಗೆ ವರದಿಯನ್ನು ಜೂನ್ 21ರೊಳಗೆ ಜಿಲ್ಲಾ ಪಂಚಾಯಿತಿಗೆ ಸಲ್ಲಿಸುವಂತೆ ತಿಳಿಸಿದರು.

**ನರೇಗಾ ಪ್ರಗತಿ ಪರಿಶೀಲನೆ:** ಮಹಾತ್ಮಾ ಗಾಂಧಿ ನರೇಗಾ ಯೋಜನೆಯ ಪ್ರಗತಿ ಪರಿಶೀಲನೆಯನ್ನು ಇದೇ ಸಂದರ್ಭದಲ್ಲಿ ನಡೆಸಲಾಯಿತು. ಉದ್ಯೋಗದಲ್ಲಿ ಮಾನವ ದಿನಗಳ ಸೃಜನೆ, ಸಂಚಿತ ಮತ್ತು ವಾರ್ಷಿಕ ಗುರಿಗೆ ಶೇಕಡವಾರು ಸಾಧನೆ, ಎಚ್‌ಹೆಚ್‌ಜಿ ಶೆಡ್ ಕಾಮಗಾರಿಗಳ ಪ್ರಗತಿ ಪರಿಶೀಲನೆ ನಡೆಸಲಾಯಿತು.ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಕೆ.ತಿಮ್ಮಪ್ಪ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಕಾರ್ಯಪಾಲಕ ಇಂಜಿನಿಯರ್ ಬಸವನಗೌಡ ಪಾಟೀಲ್, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಚಂದ್ರಶೇಖರ್ ಕಂಬಾಳಿಮಠ್ ಸೇರಿದಂತೆ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಸಹಾಯಕ ಕಾರ್ಯಪಾಲಕ ಅಭಿಯಂತರರು ಇದ್ದರು.

### ಶೆಟ್ಟಿಹಳ್ಳಿನಾಗಪ್ಪ ನಿಧನ

» ಹೊಸದುರ್ಗ



ಪೋಲಿಸ್ ಇಲಾಖೆಯಲ್ಲಿ ಐ.ಜಿ. ಆಗಿ ಕರ್ತವ್ಯ ನಿರ್ವಹಿಸಿ ನಿವೃತ್ತರಾಗಿರುವ ಎಸ್.ಪಿ ಸಿದ್ದರಾಮಪ್ಪ ಅವರ ತಂದೆಯವರಾದ ತಾಲೂಕಿನ ಶೆಟ್ಟಿಹಳ್ಳಿ ಗ್ರಾಮದ ಪ್ರಗತಿಪರ ರೈತ ಶೆಟ್ಟಿಹಳ್ಳಿನಾಗಪ್ಪ (90) ವಯೋಮಾನಸಹಜದಿಂದ ಗುರುವಾರ ನಿಧನರಾದರು. ಮೃತರಿಗೆ ಪತ್ನಿ ಎರಡು ಗಂಡು ಹಾಗೂ ಓರ್ವ ಪುತ್ರಿ ಇದ್ದು ಅಪಾರ ಬಂಧು ಬಳಗವನ್ನ ಬಿಟ್ಟು ಅಗಲಿದ್ದಾರೆ.ಮೃತರ ಅಂತ್ಯಕ್ರಿಯೆ ತಾಲೂಕಿನ ಶೆಟ್ಟಿಗ್ರಾಮದ ಹೊರವಲಯದಲ್ಲಿ ಶುಕ್ರವಾರ ಅಪಾರ ಬಂಧು ಬಳಗದ ನಡುವೆ ನೆರವೇರಿತು.

### ವಿದ್ಯುತ್ ವ್ಯತ್ಯಯ

» ದಾವಣಗೆರೆ

ಬಿಳಿಚೋಡು. ಪಲ್ಲಾಗಟ್ಟೆ ಮತ್ತು ಸೊಕ್ಕೆ 66/11 ಕೆ.ವಿ ವಿತರಣಾ ಕೇಂದ್ರದಲ್ಲಿ ನಿರ್ವಹಣಾ ಕಾಮಗಾರಿ ಕೈಗೊಳ್ಳುವುದರಿಂದ ಈ ಮಾರ್ಗದಿಂದ ಪೂರೈಕೆಯಾಗುವ ಸ್ಥಳಗಳಲ್ಲಿ ಜೂ.15 ರಂದು ಬೆಳಗ್ಗೆ 10 ರಿಂದ ಸಂಜೆ 5 ಗಂಟೆಯವರೆಗೆ ಎನ್.ಜೆ.ವೈ & ಐ.ಪಿ ಮಾರ್ಗಗಳಿಗೆ ವಿದ್ಯುತ್ ವ್ಯತ್ಯಯವುಂಟಾಗಲಿದೆ ಎಂದು ಬೆಸ್ಕಾಂ ತಿಳಿಸಿದೆ.

# ನಿಯಮಿತ ಯೋಗ ಆರೋಗ್ಯಕ್ಕೆ ಸಹಕಾರಿ





» ಚಿತ್ರದುರ್ಗ

ತಮ್ಮ ದಿನ ನಿತ್ಯದ ಕೆಲಸದ ನಡುವೆ ಯೋಗವನ್ನು ಮಾಡುವುದರ ಮೂಲಕ ನಮ್ಮ ಆರೋಗ್ಯವನ್ನು ನಾವೇ ಕಾಪಾಡಿಕೊಳ್ಳಬಹುದಾಗಿದೆ ಎಂದು ಜಿಲ್ಲಾ ಕಾರಾಗೃಹ ಅಧೀಕ್ಷಕ ಮಹಾದೇವಿ ಮರಕಟ್ಟಿ ತಿಳಿಸಿದರು.ಭಾರತೀಯ ರೆಡ್ ಕ್ರಾಸ್ ಸಂಸ್ಥೆ, ಜಿಲ್ಲಾ ಕಾರಾಗೃಹ,ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆಯುಷ್ ಇಲಾಖೆ, ಚಿನ್ಮಯ ಮಯೂರ ಯೋಗ ಕೇಂದ್ರ ಹಾಗೂ ಪತಂಜಲಿ ಮಹಿಳಾ ಯೋಗ ಕೇಂದ್ರ,ಇವರ ಸಹಯೋಗದಲ್ಲಿ ಜಿಲ್ಲಾ ಕಾರಾಗೃಹದಲ್ಲಿ ಇರುವ ಬಂಧಿ ನಿವಾಸಿಗಳಿಗೆ ಹತ್ತನೇ ಅಂತರ ರಾಷ್ಟ್ರೀಯ ಯೋಗ ದಿನಾಚರಣೆಯ ಅಂಗವಾಗಿ ಹಮ್ಮಿಕೊಳ್ಳಲಾಗಿದ್ದ ಪೂರ್ವಭಾವಿ ತರಬೇತಿಯೋಗೋತ್ಸವಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಯೋಗ ನಮ್ಮ ಪುರಾತನವಾದ ಕಲೆಯಾಗಿದೆ. ಇದನ್ನು ನಮ್ಮ ಋಷಿ ಮುನಿಗಳು ನಡೆಸಿಕೊಂಡು ಬರುತ್ತಿದ್ದರು, ಇದರಿಂದ ಅವರು ನೂರಾರು ವರ್ಷಗಳ ಕಾಲ ಜೀವಿಸುತ್ತಿದ್ದರು, ಮಿತವಾದ ಆಹಾರ, ನಿಯಮಿತವಾದ ಯೋಗಾಸನವನ್ನು ಮಾಡುವುದರ ಮೂಲಕ ನಮ್ಮ ಆರೋಗ್ಯವನ್ನು ಕಾಪಾಡಿಕೊಳ್ಳಬಹುದಾಗಿದೆ ಎಂದರು.

ರೆಡ್ ಕ್ರಾಸ್ ಸಂಸ್ಥೆಯ ಸಭಾಪತಿ ಗಾಯತ್ರಿ ಶಿವರಾಮ್ ಮಾತನಾಡಿ, ಯೋಗವನ್ನು ಮಾಡುವುದರ ಮೂಲಕ ನಾವುಗಳು ನಿರೋಗಿಯಾಗಬಹುದಾಗಿದೆ. ಯೋಗ ನಮ್ಮ ಪ್ರಾಚೀನವಾದ ವಿದ್ಯೆಯಾಗಿದೆ ಇದನ್ನು ಮಾಡಿಕೊಂಡು ನೂರಾರು ವರ್ಷ ಬದುಕಿದವರು ಇದ್ದಾರೆ. ಯೋಗದಲ್ಲಿ ನಮ್ಮ ದೇಹದ ಎಲ್ಲಾ ಸಮಸ್ಯೆಗಳಿಗೂ ಸಹಾ ಉತ್ತರವಿದೆ. ನಮಗೆ ಯಾವ ರೀತಿಯ ತೊಂದರೆ ಇದೆ ಅದಕ್ಕೆ ತಕ್ಕಂತೆ ಯೋಗಾಸನವನ್ನು ಮಾಡುವುದರ ಮೂಲಕ ಆದನ್ನು ನಿರ್ಮೂಲನೆ ಮಾಡಿಕೊಳ್ಳಬಹುದಾಗಿದೆ ಎಂದರು.

ರೆಡ್ ಕ್ರಾಸ್ ಸಂಸ್ಥೆಯ ಕಾರ್ಯದರ್ಶಿ ಮಜಹರುಲ್ಲಾ, ಆಯುಷ್ ಇಲಾಖೆಯ ಡಾ.ಪ್ರಶಾಂತ್ ಯೋಗದ ಉಪಯೋಗದ ಬಗ್ಗೆ ತಿಳಿ ಹೇಳಿದರು. ಪುರುಷರಿಗೆ ಯೋಗ ಗುರು ಮುರಳಿ ಹಾಗೂ ಮಹಿಳೆಯರಿಗೆ ಹೇಮಾವತಿ ಮತ್ತು ತಂಡದವರು ತರಬೇತಿ ನೀಡಿದರು.ಉಪಾಧೀಕ್ಷಕರಾದ ರಾಮಯ್ಯ, ಮತ್ತು ಸಿಬ್ಬಂದಿ ವರ್ಗದವರು ಹಾಜರಿದ್ದರು. ಶ್ರೀರಾಮ್‌ರೆಡ್ಡಿ ಸ್ವಾಗತಿಸಿ, ಕಾರ್ಯಕ್ರಮ ನಿರೂಪಿಸಿದರು.

## ಮಹಿಳೆಯರ ನೆರವಿಗೆ ಸ್ವಧಾರ, ಉಜ್ವಲ ವಿಲೀನ, ಶಕ್ತಿ ಸದನವಾಗಿ ಕಾರ್ಯನಿರ್ವಹಣೆ

» ದಾವಣಗೆರೆ



ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಜಿಲ್ಲಾಡಳಿತ ಕಚೇರಿಯಲ್ಲಿ ಕೇಂದ್ರ ಸರ್ಕಾರದ ಮಿಷನ್ ಶಕ್ತಿ ಯೋಜನೆಯ ಮಾರ್ಗಸೂಚಿ ಅನ್ವಯ ಸ್ವಾಧಾರ ಗೃಹ ಹಾಗೂ ಉಜ್ವಲ ಕೇಂದ್ರಗನ್ನು ವಿಲೀಗೊಳಿಸಿ ಶಕ್ತಿ ಸದನ ಕೇಂದ್ರಗಳನ್ನಾಗಿ ಸರ್ಕಾರದಿಂದ ಅನುಷ್ಠಾನಗೊಳಿಸುವ ಸಂಬಂಧ ಜಿಲ್ಲಾ ಮಟ್ಟದ ಸಮಿತಿ ಸಭೆಯನ್ನು ಜಿಲ್ಲಾಧಿಕಾರಿ ಡಾ.ವೆಂಕಟೇಶ್ ಎಂ.ವಿ. ಯವರ ಅಧ್ಯಕ್ಷತೆಯಲ್ಲಿ ನಡೆಯಿತು.

ಈ ವೇಳೆ ಮಾತನಾಡಿ ಜಿಲ್ಲಾಧಿಕಾರಿಯವರು ಪ್ರಸ್ತುತ ದಾವಣಗೆರೆಯಲ್ಲಿ 2 ಸ್ವಾಧಾರ ಗೃಹ ಹಾಗೂ 1 ರಾಜ್ಯ ಮಹಿಳಾ ನಿಲಯ ಕಾರ್ಯನಿರ್ವಹಿಸುತ್ತಿದ್ದು. ಪ್ರಸಕ್ತ ಸಾಲಿನಲ್ಲಿ ದೌರ್ಜನ್ಯಕ್ಕೊಳಗಾದ ಮಹಿಳೆಯರು ಹಾಗೂ ಅನೈತಿಕ ಸಾಗಾಣಿಕೆಯಲ್ಲಿ ರಕ್ಷಿಸಲ್ಪಟ್ಟ ಮಹಿಳೆಯರಿಗೆ ಸೂಕ್ತ ಕಾನೂನು ನೆರವು, ವೈದ್ಯಕೀಯ ನೆರವು, ವೃತ್ತಿ ತರಬೇತಿ ನೀಡಿ ಅವರನ್ನು ಪುನರ್ವಸತಿಗೊಳಿಸಲು ಸರ್ಕಾರದ ವಿವಿಧ ಇಲಾಖೆಗಳ ಕಾರ್ಯಕ್ರಮಗಳ ಮುಖಾಂತರ ಕ್ರಮವಹಿಸಬೇಕಾಗಿರುವುದು ಅವಶ್ಯಕವಾಗಿದೆ ಎಂದು ತಿಳಿಸಿದರು.

ನೊಂದ ಮಹಿಳೆಯರೊಂದಿಗೆ ಮನೋಸಂವಾದ ನಡೆಸುವುದರ ಮುಖಾಂತರ ಸಾಂತ್ವನ ನೀಡಲು ಮನೋತಜ್ಞರನ್ನು ಹಾಗೂ ನುರಿತ ಸಮಾಲೋಚಕರೊಂದಿಗೆ ಸಂಪರ್ಕ ಇಟ್ಟುಕೊಂಡು ಮಹಿಳೆಯರ ಶ್ರೇಯಾಭಿವೃದ್ಧಿಗೆ ಕ್ರಮವಹಿಸಬೇಕೆಂದು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಸುರೇಶ್.ಬಿ.ಇಟ್ನಾಳ್, ಪೊಲೀಸ್ ಅಧೀಕ್ಷಕರಾದ ಉಮಾ ಪ್ರಶಾಂತ್, ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಮಹಾವೀರ.ಮ.ಕರೆಣ್ಣ, ಮಹಾನಗರ ಪಾಲಿಕೆ ಆಯುಕ್ತರಾದ ರೇಣುಕಾ, , ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ವಾಸಂತಿ ಉಪ್ಪಾರ್, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕರಾದ ಕೊಟ್ರೇಶ್.ಜಿ, ಹಾಗೂ ಹೆಚ್ಚುವರಿ ಪೊಲೀಸ್ ಅಧೀಕ್ಷಕರಾದ ಮಂಜುನಾಥ್ , ಜಿಲ್ಲಾ ಆರೋಗ್ಯ ಹಾಗೂ ಕುಟುಂಬ ಕಲ್ಯಾಣಾಧಿಕಾರಿಗಳು, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು, ಜಿಲ್ಲಾ ಮಕ್ಕಳ ರಕ್ಷಣಾಘಟಕ ಹಾಗೂ ಲೀಡ್ ಬ್ಯಾಂಕ್ ವ್ಯವಸ್ಥಾಪಕರು ಹಾಜರಿದ್ದರು.

## ರೇಣುಕಸ್ವಾಮಿಯನ್ನು ಹತ್ಯೆ: ಕಠಿಣ ಶಿಕ್ಷೆಯಾಗಬೇಕು

» ಹೊಸದುರ್ಗ

ಚಿತ್ರದುರ್ಗದ ಸಜ್ಜನ ಕುಟುಂಬದ ರೇಣುಕಾ ಸ್ವಾಮಿ ಅವರನ್ನು ಬರ್ಬರವಾಗಿ ಹತ್ಯೆ ಮಾಡಿದವರಿಗೆ ಕೂಡಲೇ ಶಿಕ್ಷೆಯಾಗಬೇಕು. 6 ತಿಂಗಳೊಳಗೆ ತಪ್ಪಿತಸ್ಥರಿಗೆ ಜೀವಾವಧಿ ಶಿಕ್ಷೆಯಾಗಬೇಕು ಎಂದು ಅಖಿಲ ಭಾರತ ವೀರಶೈವ ಮಹಾಸಭಾ ತಾಲ್ಲೂಕು ಘಟಕದ ಕಾರ್ಯದರ್ಶಿ ಕೆ.ಎಸ್. ಕಲ್ಮಠ್ ಒತ್ತಾಯಿಸಿದರು.

ಅಖಿಲ ಭಾರತ ವೀರಶೈವ ಮಹಾಸಭಾದ ತಾಲ್ಲೂಕು ಘಟಕದ ವತಿಯಿಂದ ಪಟ್ಟಣದ ಗುರುಒಪ್ಪತ್ತಸ್ವಾಮಿ ವಿರಕ್ತಮಠದಲ್ಲಿ ಶುಕ್ರವಾರ ನಡೆದ ಸಭೆಯಲ್ಲಿ ಮಾತನಾಡಿದ ಅವರು, ರೇಣುಕಾಸ್ವಾಮಿ ಅವರನ್ನು ಅತ್ಯಂತ ಬರ್ಬರವಾಗಿ ಹತ್ಯೆ ಮಾಡಲಾಗಿದೆ. ಅವರು ತಪ್ಪು ಮಾಡಿದ್ದರೆ ಕಾನೂನು ರೀತ್ಯಾ ಕ್ರಮ ಕೈಗೊಳ್ಳಬಹುದಿತ್ತು. ಒಬ್ಬ ಧೀಮಂತ ನಟ ಈ ರೀತಿಯ ಕೃತ್ಯ ಎಸಗುವುದು ಸರಿಯಲ್ಲ. ಈ ಘಟನೆಯಿಂದಾಗಿ ಕನ್ನಡ ಚಲನಚಿತ್ರದ ತಂಡವೇ ತಲೆ ತಗ್ಗಿಸುವಂತಾಗಿದೆ.

**1 ಕೋಟಿ ಪರಿಹಾರ ನೀಡಿ :** ಒಬ್ಬ ವ್ಯಕ್ತಿಯ ಹತ್ಯೆ ಮಾಡುವುದು ಅಪರಾಧ. ರೇಣುಕಾ ಸ್ವಾಮಿ ಅವರ ಆರ್ಥಿಕ ಪರಿಸ್ಥಿತಿ ದುರ್ಬಲವಾಗಿದೆ. ಗರ್ಭಿಣಿ ಪತ್ನಿ, ವಯಸ್ಸಾದ ತಂದೆ ತಾಯಿ ಇದ್ದು, ಆದಾಯದ ಮೂಲವೇ ಇಲ್ಲದಂತಾಗಿದೆ. ಕೂಡಲೇ ಈ ಕೃತ್ಯಕ್ಕೆ ಸಂಬಂಧಿಸಿದ ನಟನ ಆಸ್ತಿ ಮುಟ್ಟುಗೋಲು ಹಾಕಿ, ₹1 ಕೋಟಿ ಹಣ ಒದಗಿಸಬೇಕು.

**'ಚಲನಚಿತ್ರ ಮಂಡಳಿ ವಿರುದ್ಧ ಆಕ್ರೋಶ :** ಇಂತಹ ಅಮಾನುಷ ಘಟನೆ ನಡೆದರೂ ಚಿತ್ರರಂಗದ ಯಾವುದೇ ವ್ಯಕ್ತಿಯಾಗಲಿ, ಮಂಡಳಿಯಾಗಲಿ ಈ ಬಗ್ಗೆ ಧ್ವನಿ ಎತ್ತಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

## 3 ತಿಂಗಳಿಗೊಮ್ಮೆ ರಕ್ತದಾನ ಮಾಡಿ: ಡಾ.ಬಸಪ್ಪರೆಡ್ಡಿ



» ಚಿತ್ರದುರ್ಗ

ಎಲ್ಲಾ ದಾನಕ್ಕಿಂತಲೂ ರಕ್ತದಾನ ಶ್ರೇಷ್ಠದಾನ. ಒಬ್ಬರ ರಕ್ತದಿಂದ ನಾಲ್ವರ ಪ್ರಾಣ ಉಳಿಸಬಹುದು ಎಂದು ಬಸಪ್ಪ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಯ ಡಾ.ಬಸಪ್ಪರೆಡ್ಡಿ ಹೇಳಿದರು.ಭಾರತೀಯ ರೆಡ್‌ಕ್ರಾಸ್ ಸಂಸ್ಥೆ ಚಿತ್ರದುರ್ಗ, ಬಸಪ್ಪ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ, ರೋಟರಿ ಕ್ಲಬ್, ಕರ್ನಾಟಕ ರಕ್ಷಣಾ ವೇದಿಕೆ ಜಿಲ್ಲಾ ಘಟಕದಿಂದ ತುರುವನೂರು ರಸ್ತೆಯಲ್ಲಿರುವ ಬಸಪ್ಪ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಯಲ್ಲಿ ವಿಶ್ವ ರಕ್ತದಾನಿಗಳ ದಿನಾಚರಣೆ ಅಂಗವಾಗಿ ಶುಕ್ರವಾರ ಏರ್ಪಡಿಸಲಾಗಿದ್ದ ಸ್ವಯಂ ಪ್ರೇರಿತ ರಕ್ತದಾನ ಶಿಬಿರ ಉದ್ಘಾಟಿಸಿ ಮಾತನಾಡಿದರು.ಇಪ್ಪತ್ತರಿಂದ ಅರವತ್ತು ವರ್ಷದ ಆರೋಗ್ಯವಂತರೆಲ್ಲರೂ ಮೂರು ತಿಂಗಳಿಗೊಮ್ಮೆ ರಕ್ತದಾನ ಮಾಡಬಹುದು. ರಕ್ತದಾನ ಮಾಡುವುದರಿಂದ ನಿಶ್ಯಕ್ತಿಯಾಗುವುದಿಲ್ಲ. ಹೃದಯಾಘಾತದಂತ ಸಮಸ್ಯೆಗಳು ಕಡಿಮೆಯಾಗುತ್ತವೆ ಎಂದು ತಿಳಿಸಿದರು.ಕರ್ನಾಟಕ ರಕ್ಷಣಾ ವೇದಿಕೆ ಜಿಲ್ಲಾಧ್ಯಕ್ಷ ಟಿ.ರಮೇಶ್ ಮಾತನಾಡಿ, ರಕ್ತದ ಅವಶ್ಯಕತೆ ತುಂಬಾ ಇದೆ. ರಕ್ತದಾನ ಶ್ರೇಷ್ಠದಾನ. ಆದುದರಿಂದ ನಮ್ಮ ಕಾರ್ಯಕರ್ತರು ಪ್ರತಿ ವರ್ಷವೂ ರಕ್ತದಾನ ಮಾಡುತ್ತಿರುತ್ತಾರೆ. ಅಪಘಾತ, ಆಪರೇಷನ್, ಹೆರಿಗೆ ಸಮಯದಲ್ಲಿ ರಕ್ತ ಬೇಕಾಗುತ್ತದೆ. ಎಲ್ಲರೂ ರಕ್ತದಾನ ಮಾಡುವಲ್ಲಿ ಮುಂದಾಗಿ ಎಂದು ಮನವಿ ಮಾಡಿದರು.ರೆಡ್‌ಕ್ರಾಸ್ ಸಂಸ್ಥೆ ಸಭಾಪತಿ ಗಾಯತ್ರಿ ಶಿವರಾಂ ಮಾತನಾಡುತ್ತ ಶೇ.75 ರಷ್ಟು ಕೂಡ ರಕ್ತ ನಮಗೆ ಸಿಗುತ್ತಿಲ್ಲ. ಜಿಲ್ಲೆಯಲ್ಲಿ ಎರಡು ಹೈವೇಗಳು ಹಾದು ಹೋಗಿರುವುದರಿಂದ ಅಪಘಾತಗಳು ಸಂಭವಿಸುತ್ತಲೆ ಇರುತ್ತವೆ. ಅಂತಹ ಸಮಯದಲ್ಲಿ ರಕ್ತದ ಅವಶ್ಯತೆ ಇರುತ್ತದೆ. ಪ್ರತಿಯೊಬ್ಬ ಆರೋಗ್ಯವಂತರು ಸ್ವಯಂ ಪ್ರೇರಿತರಾಗಿ ರಕ್ತದಾನ ಮಾಡುವ ಮೂಲಕ ಸಾವು-ಬದುಕಿನ ನಡುವೆ ಹೋರಾಡುತ್ತಿರುವವರ ಪ್ರಾಣ ಉಳಿಸಿ ಎಂದು ವಿನಂತಿಸಿದರು.ರೋಟರಿ ಕ್ಲಬ್ ಚಿತ್ರದುರ್ಗ ಅಧ್ಯಕ್ಷ ಕನಕರಾಜ್ ಮಾತನಾಡಿ ರಕ್ತಕ್ಕೆ ಬೇರೆ ಯಾವುದು ಪರ್ಯಾಯವಿಲ್ಲ. ಅತ್ಯವಶ್ಯಕವಾಗಿರುವ ರಕ್ತ ಬೇಕೆಂದಾಗ ಸಿಗಲ್ಲ. ಹಾಗಾಗಿ ಎಲ್ಲರೂ ತಮ್ಮ ತಮ್ಮ ರಕ್ತದ ಗುಂಪುಗಳನ್ನು ತಿಳಿದು ಕೊಂಡಿರಬೇಕು. ತುರ್ತು ಸಂದರ್ಭಗಳಲ್ಲಿ ರಕ್ತ ನೀಡಿ ಅಮೂಲ್ಯವಾದ ಜೀವ ಉಳಿಸುವುದು ಮಾನವೀಯತೆ ಎಂದರು.

**ಪ್ರಮುಖ ಸುದ್ದಿ**

# ಯೋಗ, ದೇಹಕ್ಕಲ್ಲದೆ ಮಾನಸಿಕ ಸದೃಢತೆಗು ಸಹಕಾರಿ

» ಹೊಸದುರ್ಗ

ಆಧುನಿಕ ಜೀವನ ಪದ್ಧತಿಗೆ ಹೊಂದಿಕೊಂಡಿರುವ ಈಗಿನ ಬಹಳಷ್ಟು ಜನರು ವಿವಿಧ ಕಾಯಿಲೆಗಳಿಗೆ ತುತ್ತಾಗುತ್ತಿರುವುದು ವಿಷಾಧಕರ ಸಂಗತಿ, ಕೇವಲ ಯೋಗ ಪ್ರಾಣಯಾಮದಿಂದ ದೇಹವನ್ನು ಮತ್ತು ಮನಸ್ಸನ್ನು ಸದೃಢ ಮಾಡಿಕೊಳ್ಳಬಹುದು. ಎಂದು ಪುರಸಭಾ ಸದಸ್ಯೆ ಹಾಗೂ ಸದ್ಗುರು ಆಯುರ್ವೇದ ಕಂಪನಿಯ ಸಿಇಒ ಡಾ. ಸ್ವಾತಿ ಪ್ರದೀಪ್ ತಿಳಿಸಿದರು.

ಜಿಲ್ಲಾಡಳಿತ, ಚಿತ್ರದುರ್ಗ ಜಿಲ್ಲಾ ಪಂಚಾಯತ್, ಸದ್ಗುರು ಆಯುರ್ವೇದ ಹಾಗೂ ಜಿಲ್ಲಾ ಆಯುಷ್ ಇಲಾಖೆ ಮತ್ತು ಹೊಸದುರ್ಗ ತಾಲೂಕು ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಸದ್ಗುರು ಆಯುರ್ವೇದ ಸಂಸ್ಥೆಯಲ್ಲಿ ನಡೆದ ಯೋಗ ತರಬೇತಿ ಮತ್ತು ಆಯುಷ್ ಪರಿಚಯ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಎಲ್ಲಾ ವಯಸ್ಸಿನವರೆಗೂ ಯೋಗ ಅತ್ಯವಶ್ಯಕ ಅನ್ನೋ ಸದೃಢ ಆರೋಗ್ಯಕ್ಕಾಗಿ ಎಲ್ಲರೂ ಯೋಗವನ್ನು ಮಾಡಲೇಬೇಕು. ಯೋಗನಮ್ಮಮಾನಸಿಕಒತ್ತಡವನ್ನುಕಡಿಮೆ




ಮಾಡುತ್ತದೆ. ಯೋಗ ಮಾಡುವುದರಿಂದ ಪ್ರತಿನಿತ್ಯ ನಾವು ಮಾಡುವ ಕೆಲಸಗಳಲ್ಲಿ ಏಕಾಗ್ರತೆ ಸಿಗುತ್ತದೆ. ಯೋಗವನ್ನು ಎಲ್ಲಾ ವಯಸ್ಸಿನವರು ಮಾಡಬಹುದು. ಯೋಗ ಮಾಡಿದವರು ಮಾನಸಿಕ ಹಾಗೂ ದೈಹಕವಾಗಿ ಸದೃಢರಾಗಿ ದೀರ್ಘಕಾಲ ಬದುಕು ನಡೆಸಬಲ್ಲರು ಎಂದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಆಯುಷ್ಯ ವೈದ್ಯಾಧಿಕಾರಿ ಚಂದ್ರಕಾಂತ್ ನಾಗಸಂದ್ರ ಪುರಸಭಾ ಸದಸ್ಯ ಶಶಿಕುಮಾರ್, ತಾಲೂಕ ಆಯುಷ್ ಅಧಿಕಾರಿ ಡಾ. ನದಾಫ್ ,ಡಾ: ಮಹೇಶ್, ಡಾ ಶಿವಕುಮಾರ್,ಯೋಗ ಮತ್ತು ಪ್ರಕೃತಿ ಚಿಕಿತ್ಸಾ ವೈದ್ಯ ಡಾ.ಬಾಹುಬಲಿ,ಡಾ ಪವನ್ ಕುಮಾರ್, ತಾಲೂಕು ಶುಶ್ರುಶಾಧಿಕಾರಿ ವಿಜಯಕುಮಾರಿ ಬಿ ,ಹಾಗೂ ಆಯುಷ್ ಇಲಾಖೆ ಸಿಬ್ಬಂದಿಗಳು ಮತ್ತು ಸದ್ಗುರು ಆಯುರ್ವೇದ ಸಂಸ್ಥೆಯ ಕಾರ್ಮಿಕರು ಭಾಗವಹಿಸಿದ್ದರು.

> ಯೋಗದಿಂದ ಆರೋಗ್ಯದ ಯೋಗ್ಯತೆಯನ್ನ ಕಾಪಾಡಿಕೊಳ್ಳಬಹುದು. ಮಾನವನ ಆಂತರಿಕ ಮತ್ತು ಬಾಹ್ಯ ಸೌಂದರ್ಯಕ್ಕೆ ಯೋಗ ಅತ್ಯಂತ ಪರಿಣಾಮಕಾರಿ ಯೋಗದಿಂದ ಸೌಂದರ್ಯ ವೃದ್ಧಿಯಾಗುತ್ತದೆ. ವಯಸ್ಸಿನ ಅಂತರವಿಲ್ಲದೆ ಯೋಗ ಮಾಡಬಹುದು ಮಾಜಿ ಪ್ರಧಾನಿ ದೇವೇಗೌಡರು ಪ್ರತಿನಿತ್ಯ ಯೋಗ ಮಾಡಿ ಆರೋಗ್ಯಕರವಾಗಿದ್ದಾರೆ. ಇವರು ನಮಗೆ ಮಾದರಿಯಾಗಿ ನಿಲ್ಲಬಲ್ಲರು.
>
> » **ಸದ್ಗುರು ಪ್ರದೀಪ್, ಯುವ ಉದ್ಯಮಿ, ಸದ್ಗುರು ಆಯುರ್ವೇದ**

## ಫಾಸ್ಟ್ ನ್ಯೂಸ್

### ಗ್ರಾಮೀಣ ಭಾಗದಲ್ಲಿ ಮರೀಚಿಕೆಯಾದ ಸ್ವಚ್ಚತೆಯ ಕಾರ್ಯ: ಕರ್ನಾಟಕ ರಾಜ್ಯ ರೈತ ಸಂಘದಿಂದ ಪ್ರತಿಭಟನೆ




» **ಚಳ್ಳಕೆರೆ**

ಗ್ರಾಮೀಣ ಭಾಗಗಳ ಗ್ರಾಮ ಪಂಚಾಯಿತಿ ಆಡಳಿತ ಸ್ವಚ್ಚತೆಯ ಕಾರ್ಯವನ್ನು ಸಂಪೂರ್ಣವಾಗಿ ಕೈಬಿಟ್ಟಿದ್ದು, ಇದರಿಂದ ಗ್ರಾಮೀಣ ಜನರ ಆರೋಗ್ಯದಲ್ಲಿ ಅನೇಕ ಸಮಸ್ಯೆಗಳು ಉಂಟಾಗುವ ಸಂಭವವಿದೆ. ಯಾವುದೇ ರೋಗ ವ್ಯಾಪಿಸಬಹುದಾದ ಸಂದರ್ಭವಿದ್ದು, ಸಂಬಂಧಪಟ್ಟ ಅಧಿಕಾರಿಗಳು ಗ್ರಾಮೀಣ ಮಟ್ಟದ ಸ್ವಚ್ಚತಾ ಕಾರ್ಯಕ್ಕೆ ಕೂಡಲೇ ಗಮನಹರಿಸಬೇಕೆಂದು ಕರ್ನಾಟಕ ರಾಜ್ಯ ರೈತ ಸಂಘದ ಕಾರ್ಯದರ್ಶಿ ಬೇಡರೆಡ್ಡಿಹಳ್ಳಿ ಬಸವರೆಡ್ಡಿ ಒತ್ತಾಯಿಸಿದ್ದಾರೆ. ಅವರು, ಶುಕ್ರವಾರ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿಗಳ ಪ್ರವೇಶದ್ವಾರದಲ್ಲಿ ರೈತರೊಡನೆ ಪ್ರತಿಭಟನೆ ನಡೆಸಿ ತಾಲ್ಲೂಕಿನ 40 ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳಲ್ಲಿ ಎಲ್ಲಿಯೂ ಸ್ವಚ್ಚತೆ ಕಾಣದಾಗಿದೆ. ಪ್ರತಿಯೊಂದು ಗ್ರಾಮ ಪಂಚಾಯಿತಿಯಲ್ಲೂ ಚುನಾಯಿತ ಸದಸ್ಯತರು, ಪಂಚಾಯಿತಿ ಅಭಿವೃದ್ದಿ ಅಧಿಕಾರಿ, ಕಾರ್ಯದರ್ಶಿ, ನೀರುಗಟ್ಟಿಗಳು ಹಾಗೂ ಪೌರಕಾರ್ಮಿಕರು ಸಾಕಷ್ಟು ಸಂಖ್ಯೆಯಲ್ಲಿದ್ದರೂ ಸಹ ಸ್ವಚ್ಚತೆಯ ಬಗ್ಗೆ ನಿರ್ಲಕ್ಷ್ಯ ತಾಳಿದ್ದಾರೆ. ಗ್ರಾಮೀಣ ಭಾಗದ ಸ್ವಚ್ಚೆತ ಬಗ್ಗೆ ಯಾವುದೇ ರೀತಿಯ ಯೋಜನೆ ರೂಪಿಸಿಲ್ಲ. ಆದ್ದರಿಂದ ಸಂಬಂಧಪಟ್ಟ ಅಧಿಕಾರಿಗಳು ಈ ಬಗ್ಗೆ ಕೂಡಲೇ ಗ್ರಾಮೀಣ ಭಾಗದ ಸ್ವಚ್ಚತೆಗೆ ಮುಂದಾಗಬೇಕೆಂದು ಮನವಿ ಮೂಲಕ ಒತ್ತಾಯಿಸಿದ್ದಾರೆ.ಮನವಿ ಸ್ವೀಕರಿಸಿದ ಎಡಿ ಸಂಪತ್‌ಕುಮಾರ್, ತಾವು ನೀಡಿರುವ ಮನವಿಯನ್ನು ಹಿರಿಯ ಅಧಿಕಾರಿಗಳ ಗಮನಕ್ಕೆ ತಂದು ಗ್ರಾಮೀಣ ಮಟ್ಟದ ಸ್ವಚ್ಚತೆಯ ಬಗ್ಗೆ ಕ್ರಮ ಕೈಗೊಳ್ಳಯವ ಭರವಸೆ ನೀಡಿದರು. ತಾಲ್ಲೂಕು ಅಧ್ಯಕ್ಷ ಡಿ.ಚಂದ್ರಶೇಖರನಾಯ್ಕ, ಕಾರ್ಯಾಧ್ಯಕ್ಷ ಕೆ.ಮಲ್ಲೇಶಪ್ಪ, ಪ್ರಶಾಂತ್‌ರೆಡ್ಡಿ, ಮಹೇಶ, ಪೃಥ್ವಿರಾಜ್, ಮಂಜುನಾಥ ಮುಂತಾದವರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

### ಡಾ;ಬಿ.ಆರ್.ಅಂಬೇಡ್ಕರ್, ವಾಜಪೇಯಿ ವಸತಿ ಯೋಜನೆಯಡಿ ಫಲಾನುಭವಿಗಳಿಂದ ಅರ್ಜಿ

» **ದಾವಣಗೆರೆ**

ದಾವಣಗೆರೆ ಮಹಾನಗರ ಪಾಲಿಕೆ ವ್ಯಾಪ್ತಿಯ ಉತ್ತರ ಮತ್ತು ದಕ್ಷಿಣ ಕ್ಷೇತ್ರದಲ್ಲಿನ ಸಾರ್ವಜನಿಕರ ಶಿಥಿಲಗೊಂಡಿರುವ ಮನೆಗಳು ಹಾಗೂ ಖಾಲಿ ನಿವೇಶನ ಹೊಂದಿರುವ ನಿವಾಸಿಗಳಿಗೆ ಡಾ; ಬಿ.ಆರ್.ಅಂಬೇಡ್ಕರ್, ವಾಜಪೇಯಿ ವಸತಿ ಯೋಜನೆಯಡಿಯಲ್ಲಿ ಮನೆ ಕಟ್ಟಿಕೊಳ್ಳಲು ಅರ್ಜಿ ಆಹ್ವಾನಿಸಲಾಗಿದೆ. ಅಲ್ಪಸಂಖ್ಯಾತರ 50, ಸಾಮಾನ್ಯ 329 ಸೇರಿ ಒಟ್ಟು. 379 ಹಾಗೂ ಡಾ. ಬಿ.ಆರ್. ಅಂಬೇಡ್ಕರ್ ಯೋಜನೆಯಡಿಯಲ್ಲಿ ಪರಿಶಿಷ್ಟ ಜಾತಿ 86, ಪರಿಶಿಷ್ಟ ಪಂಗಡ 35, ಒಟ್ಟು 500 ಹೆಚ್ಚುವರಿಯಾಗಿ ನಿಗದಿಪಡಿಸಲಾಗಿದ್ದು ಮನೆ ನಿರ್ಮಿಸಿಕೊಳ್ಳುವ ಫಲಾನುಭವಿಗಳನ್ನು ಆಯ್ಕೆ ಮಾಡಲು ಅವಕಾಶವಿರುತ್ತದೆ. ಆಸಕ್ತಿಯುಳ್ಳ ಫಲಾನುಭವಿಗಳು ತಮ್ಮ ಆಧಾರ್ ಕಾರ್ಡ್ (ಗಂಡ ಮತ್ತು ಹೆಂಡತಿ), ರೇಷನ್ ಕಾರ್ಡ್, ಮತದಾರರ ಗುರುತಿನ ಚೀಟಿ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಬ್ಯಾಂಕ್ ಪಾಸ್ ಪುಸ್ತಕ, ಚಾಲ್ತಿ ಸಾಲಿನ ಇ–ಸ್ವತ್ತು, ಇ.ಸಿ., ನಕಲು ಪ್ರತಿ ಮತ್ತು 2 ಭಾವಚಿತ್ರ ಹಾಗೂ ಅರ್ಜಿಯೊಂದಿಗೆ ಪ್ರಕಟಣೆ ಹೊರಡಿಸಿದ 30 ದಿನದೊಳಗಾಗಿ ಪಾಲಿಕೆ ಕಚೇರಿಗೆ ಸಲ್ಲಿಸಲು ಆಯುಕ್ತರಾದ ರೇಣುಕಾ ತಿಳಿಸಿದ್ದಾರೆ.

### ವಿದ್ಯಾರ್ಥಿನಿಲಯ ಪ್ರವೇಶಕ್ಕಾಗಿ ಅರ್ಜಿ

» **ದಾವಣಗೆರೆ**

ಪ್ರಸಕ್ತ ಸಾಲಿಗೆ ಸಮಾಜ ಕಲ್ಯಾಣ ಇಲಾಖೆಯ ದಾವಣಗೆರೆ ತಾಲ್ಲೂಕಿನ ವ್ಯಾಪ್ತಿಗೆ ಬರುವ ಸರ್ಕಾರಿ ಮೆಟ್ರಿಕ್ ಪೂರ್ವ, ನಂತರದ ಬಾಲಕರ, ಬಾಲಕಿಯರ ವಿದ್ಯಾರ್ಥಿನಿಲಯಗಳಿಗೆ ಪ್ರವೇಶಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಿಗೆ ಪ.ಜಾತಿ, ಪ.ವರ್ಗ ಹಾಗೂ ಇತರೆ ವರ್ಗದ ವಿದ್ಯಾರ್ಥಿಗಳು ಅರ್ಜಿಯನ್ನು ಸಲ್ಲಿಸಬಹುದು. ಜಾತಿ, ಆದಾಯ ಪ್ರಮಾಣ ಪತ್ರದ ಜೆರಾಕ್ಸ್ ಪ್ರತಿ, ಆಧಾರ್ ಕಾರ್ಡ್ ಜೆರಾಕ್ಸ್ ಪ್ರತಿ, ಹಿಂದಿನ ತರಗತಿಯಲ್ಲಿ ಪಾಸಾದ ಅಂಕಪಟ್ಟಿಯ ಪ್ರತಿ, ವಿದ್ಯಾರ್ಥಿಯ ಬ್ಯಾಂಕ್ ಪಾಸ್ ಪುಸ್ತಕದ ಜೆರಾಕ್ಸ್ ಪ್ರತಿಗಳ ದೃಢೀಕೃತದೊಂದಿಗೆ ಅರ್ಜಿಯನ್ನು ಸಂಬಂಧಿಸಿದ ವಾರ್ಡನ್ ರವರಿಗೆ ಸಲ್ಲಿಸಬೇಕು. ವೆಬ್‌ಸೈಟ್ ವಿಳಾಸÀ:https://swdservices.karnataka.gov.in/swdhmis/ ಹೆಚ್ಚಿನ ಮಾಹಿತಿಗಾಗಿ ದೂ.ಸಂ: 08192–231413 ನ್ನು ಸಂಪರ್ಕಿಸಲು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

# ಶಕ್ತಿ ಯೋಜನೆಗೆ ವರ್ಷದ ಸಂಭ್ರಮ

## ಕೆಎಸ್‌ಆರ್‌ಟಿಸಿಗೆ ರೂ.85.71 ಕೋಟಿ ಆದಾಯ– ಚಿತ್ರದುರ್ಗ ಜಿಲ್ಲಾ ಘಟಕ: 2.21 ಕೋಟಿ ನಾರಿಯರು ಉಚಿತ ಪ್ರಯಾಣ

» **ಚಿತ್ರದುರ್ಗ**

ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಶಕ್ತಿ ಯೋಜನೆ ಜಾರಿಯಾಗಿ ವರ್ಷ ತುಂಬಿದೆ. ಈ ಯೋಜನೆಯಡಿ ಕಳೆದ ಒಂದು ವರ್ಷದಲ್ಲಿ ಜಿಲ್ಲೆಯ ಸಾರಿಗೆ ಸಂಸ್ಥೆಯ ಬಸ್‌ಗಳಲ್ಲಿ 2.21 ಕೋಟಿ ನಾರಿಯರು ಉಚಿತ ಪ್ರಯಾಣ ಬೆಳೆಸಿರುವುದು ಗಮನಾರ್ಹ.

ಮಹಿಳಾ ಸಬಲೀಕರಣ ಉದ್ದೇಶದಿಂದ ಜಾರಿಗೊಳಿಸಿದ ಮಹಿಳೆಯರಿಗೆ ಉಚಿತ ಸಾರಿಗೆ ಸೇವೆ ನೀಡುವ ಶಕ್ತಿ ಯೋಜನೆಯಡಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ ಚಿತ್ರದುರ್ಗ ವಿಭಾಗಕ್ಕೆ ಮಹಿಳೆಯರಿಗೆ ನೀಡಿರುವ ಶೂನ್ಯ ದರದ ಟಿಕೆಟ್ ನೀಡಿಕೆ ಮೂಲಕ ರೂ.85.71 ಕೋಟಿ ಆದಾಯ ಲಭಿಸಿದೆ.

ಮಹಿಳೆಯರು, ವಿದ್ಯಾರ್ಥಿನಿಯರು ಮತ್ತು ಲಿಂಗತ್ವ ಅಲ್ಪಸಂಖ್ಯಾತರು ಸೇರಿದಂತೆ ಸಮಸ್ತ ನಾರಿಯರ ಸಂಚಾರಕ್ಕೆ ಶಕ್ತಿಯನ್ನು ನೀಡಿದೆ ರಾಜ್ಯ ಸರ್ಕಾರದ ಶಕ್ತಿ ಯೋಜನೆ. ಇದರ ಮೂಲಕ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ನಗರ ಸಾರಿಗೆ, ಸಾಮಾನ್ಯ ಮತ್ತು ವೇಗದೂತ ಬಸ್ಸುಗಳಲ್ಲಿ ರಾಜ್ಯಾದ್ಯಂತ ಉಚಿತವಾಗಿ ಪ್ರಯಾಣಿಸಲು ನಾರಿಯರಿಗೆ ಅವಕಾಶ ಲಭಿಸಿದ್ದು, ಜಿಲ್ಲೆಯಲ್ಲಿ ವಾರ್ಷಿಕ ರೂ.85.71 ಕೋಟಿ ವಹಿವಾಟುನೊಂದಿಗೆ ಶಕ್ತಿ ಯೋಜನೆಯು ಮುಂದುವರೆದಿದ್ದು, ಶಕ್ತಿ ಯೋಜನೆಗೆ ಚಾಲನೆ ನೀಡಿದ 2023 ರ ಜೂನ್ 11 ಮೊದಲ ದಿನದಿಂದಲೂ ಇಂದಿನವರೆಗೂ ಮಹಿಳಾ ಪ್ರಯಾಣಿಕರು ಹೆಚ್ಚಿನ ಸಂಖ್ಯೆಯಲ್ಲಿ ಯೋಜನೆಯನ್ನು ಬಳಸಿಕೊಳ್ಳುತ್ತಿದ್ದಾರೆ.



ಸಕಾರದ ಶಕ್ತಿ ಯೋಜನೆಯು ಸಾಮಾಜಿಕ ಕ್ಷೇತ್ರದಲ್ಲಿ ಹಲವು ರೀತಿಯ ಬದಲಾವಣೆಗೆ ಸಾಕ್ಷಿಯಾಗಿದೆ. ಮುಖ್ಯವಾಗಿ ಗ್ರಾಮೀಣ ಭಾಗದಿಂದ ನಗರ ಪಟ್ಟಣಗಳಿಗೆ ತೆರಳಿ ದುಡಿಯುವ ಮಹಿಳೆಯರಿಗೆ ವರದಾನವಾಗಿದೆ. ಖಾಸಗಿ ಹಾಗೂ ಅಸಂಘಟಿತ ವಲಯಗಳಲ್ಲಿ ಕೆಲಸ ನಿರ್ವಹಿಸುವ ಮಹಿಳೆಯರು ಸಂಚಾರಿ ವೆಚ್ಚದಿಂದ ಮುಕ್ತರಾಗಿದ್ದಾರೆ. ಮಹಿಳೆಯರು ಸಾಮಾನ್ಯವಾಗಿ ದುಡಿಯಲೆಂದೆ ತಮ್ಮ ತಿಂಗಳ ಆದಾಯದ ಶೇ.10ರಷ್ಟು ಹಣವವನ್ನು ಸಂಚಾರಕ್ಕಾಗಿ ವ್ಯಯಿಸಬೇಕಿತ್ತು. ಇನ್ನು ಶಾಲಾ–ಕಾಲೇಜು ವಿದ್ಯಾರ್ಥಿನಿಯರು ವಾರ್ಷಿಕ ಪಾಸ್ ಪಡೆಯಲು ನೀಡಬೇಕಿದ್ದ ಹಣದಲ್ಲಿಯೂ ಉಳಿತಾಯವಾಗಿದೆ. ಉದ್ಯೋಗ, ಶಿಕ್ಷಣ ಹಾಗೂ ಪ್ರವಾಸ ಸೇರಿದಂತೆ ಹಲವು ಚಟುವಟಿಕೆಗಳಿಗೆ ಶಕ್ತಿ ಯೋಜನೆಯಿಂದ ಶಕ್ತಿ ಲಭಿಸಿದೆ. ಕೆಎಸ್‌ಆರ್‌ಟಿಸಿ ಬಸ್‌ಗಳ ಭರ್ತಿಯ ಜೊತೆಗೆ ನಾರಿಯರು ಆದಾಯ ಹೆಚ್ಚಿಸಿದ್ದಾರೆ. ಧಾರ್ಮಿಕ ಕೇಂದ್ರ ಹಾಗೂ ಪ್ರವಾಸಿ ತಾಣಗಳಿಗೂ ಭೇಟಿ ನೀಡುವವರ ಸಂಖ್ಯೆಯೂ ಹೆಚ್ಚಳಕ್ಕೆ ಕಾರಣವಾಗಿದೆ. ಇದರಿಂದ ಧಾರ್ಮಿಕ ಕೇಂದ್ರಗಳಲ್ಲೂ ದೇಣಿಗೆ ಸಂಗ್ರಹವೂ ಸಹ ದುಪ್ಪಾಟ್ಟಾಗಿದೆ.

**20 ಹೆಚ್ಚುವರಿ ಮಾರ್ಗ:** ಶಕ್ತಿ ಯೋಜನೆ ಜಾರಿಯಾದ ನಂತರ ಪ್ರಯಾಣಿಕರಿಗೆ ಅನುಕೂಲವಾಗುವಂತೆ ಜಿಲ್ಲೆಯಾದ್ಯಂತ 20 ಕ್ಕೂ ಹೆಚ್ಚು ಹೆಚ್ಚುವರಿ ಮಾರ್ಗಗಳನ್ನು ಹೆಚ್ಚಿಸಲಾಗಿದ್ದು, ಪ್ರಯಾಣ ಜನಸಂದಣಿಗೆ ಅನುಗುಣವಾಗಿ ಬೇಡಿಕೆಗೆ ಅನುಸಾರವಾಗಿ ವಾಹನಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ.

**30 ಹೊಸ ವಾಹನ ಸೇರ್ಪಡೆ:** ಕೆಎಸ್‌ಆರ್‌ಟಿಸಿ ಚಿತ್ರದುರ್ಗ ವಿಭಾಗಕ್ಕೆ ಅಶ್ವಮೇಧ, ವೇಗದೂತ ಸೇರಿದಂತೆ 30 ಹೊಸ ವಾಹನಗಳು ಸೇರ್ಪಡೆಯಾಗಿವೆ.

**ಬೇಡಿಕೆ ಅನುಸಾರ ವಾಹನ ಕಾರ್ಯಾಚರಣೆಗೆ ಕ್ರಮ:** ಶಕ್ತಿ ಯೋಜನೆ ಜಾರಿಯಾದಾಗಿನಿಂದ ಪ್ರತಿದಿನ ಸರಾಸರಿ 60 ಸಾವಿರಕ್ಕೂ ಹೆಚ್ಚು ಮಹಿಳೆಯರು ಚಿತ್ರದುರ್ಗ ಜಿಲ್ಲೆಯಿಂದ ವಿವಿಧ ಮಾರ್ಗಗಳ ಬಸ್‌ಗಳಲ್ಲಿ ಉಚಿತವಾಗಿ ಪ್ರಯಾಣಿಸುತ್ತಿದ್ದಾರೆ. ಕಳೆದ ಒಂದು ವರ್ಷದಲ್ಲಿ ಜಿಲ್ಲೆಯ ಸಾರಿಗೆ ಸಂಸ್ಥೆಯ ಬಸ್‌ಗಳಲ್ಲಿ 2.21 ಕೋಟಿ ನಾರಿಯರು ಉಚಿತ ಪ್ರಯಾಣ ಮಾಡಿದ್ದು, ರೂ.85.71 ಕೋಟಿ ಆದಾಯ ಲಭಿಸಿದೆ. ಶಕ್ತಿ ಯೋಜನೆಯಿಂದ ಸಾರಿಗೆ ಸಂಸ್ಥೆಗೆ ವಾರ್ಷಿಕ ಆದಾಯ ಹೆಚ್ಚಾಗಿದೆ. ಮಾರ್ಗಸೂಚಿಹಾಗೂಬಸ್‌ಬೇಡಿಕೆಗಳನ್ನು ಪರಿಗಣಿಸಿ ಹೆಚ್ಚುವರಿ ಮಾರ್ಗಗಳಿಗೆ

## ಅಂತರಾಷ್ಟ್ರೀಯ ಯೋಗ ದಿನಾಚರಣೆ: ಯೋಗೋತ್ಸವ

» **ಚಿತ್ರದುರ್ಗ:**

ಚಿತ್ರದುರ್ಗ ನಗರದ ಮಠದ ಕುರುಬರಹಟ್ಟಿ ಸಮೀಪದ ಎಸ್‌ಜೆಎಂ ವಸತಿ ಶಾಲೆಯಲ್ಲಿ ಶುಕ್ರವಾರ ಜಿಲ್ಲಾ ಆಯುಷ್ ಇಲಾಖೆ, ಎಸ್‌ಜೆಎಂ ಶಿಕ್ಷಣಗಳ ಸಮೂಹ ಹಾಗೂ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಸಹಯೋಗದಲ್ಲಿ 10ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ ಅಂಗವಾಗಿ ಯೋಗೋತ್ಸವ ಕಾರ್ಯಕ್ರಮಕ್ಕೆ ಜಿಲ್ಲಾ ಆಯುಷ್ ಅಧಿಕಾರಿ ಡಾ.ಚಂದ್ರಕಾಂತ ಎಸ್.ನಾಗಸಮುದ್ರ ಉದ್ಘಾಟಿಸಿದರು.

ಈ ವೇಳೆ ಮಾತನಾಡಿದ ಜಿಲ್ಲಾ ಆಯುಷ್ ಅಧಿಕಾರಿ ಡಾ.ಚಂದ್ರಕಾಂತ ಎಸ್.ನಾಗಸಮುದ್ರ, 10ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆಯನ್ನು ಕಳೆದ ವರ್ಷ ನಡೆದ 9ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆಯಂತೆ ಅಭೂತಪೂರ್ವವಾಗಿ ಯಶಸ್ವಿಗೊಳಿಸಲು ಇದು ಮತ್ತೊಂದು ದಿಟ್ಟ ಹೆಜ್ಜೆ ಎಂದು ಹೇಳಿ, ಮಕ್ಕಳೆಲ್ಲರಿಗೂ ತಮ್ಮ ಪೋಷಕರೊಂದಿಗೆ ಯೋಗಾಭ್ಯಾಸ ಮಾಡಲು ತಿಳಿಸಿದರು. ಜೂನ್ 21ರಂದು ಅಂತರಾಷ್ಟ್ರೀಯ ಯೋಗ ದಿನಾಚರಣೆ ಆಯೋಜಿಸಿದ್ದು, ಅಂದು ಬೆಳಿಗ್ಗೆ 7 ಗಂಟೆಗೆ ಸಾರ್ವಜನಿಕರು, ಮಕ್ಕಳು ಎಲ್ಲರೂ ಭಾಗವಹಿಸಿ ಯಶಸ್ವಿಗೊಳಿಸಲು ತಿಳಿಸಿದರು. ಅದಕ್ಕೂ ಮೊದಲು ಜೂನ್ 18ರಂದು ಬೆಳಿಗ್ಗೆ 7ಕ್ಕೆ ಯೋಗಜಾಥಾಕ್ಕೆ ಕೂಡ ಹೆಚ್ಚಿನ ಜನರು ಭಾಗವಹಿಸಲು ತಿಳಿಸಿದರು.



ಕೊಳಹಾಳ್ ಉಪಮುಖ್ಯ ವೈದ್ಯಾಧಿಕಾರಿ ಡಾ.ಜಿ.ಶೇಖರಯ್ಯ ಮಠ ಮಾತನಾಡಿ, ಜಿಲ್ಲೆಯಲ್ಲಿರುವ ಆಯುಷ್ ಕೇಂದ್ರಗಳ ಮಾಹಿತಿ ಹಾಗೂ ಆಯುಷ್ ಚಿಕಿತ್ಸೆ ಪದ್ಧತಿ ಬಗ್ಗೆ ವಿಸ್ತರವಾಗಿ ವಿವರಿಸಿ ಹಾಗೂ ಯೋಗದ ಮಹತ್ವ ತಿಳಿಸಿಕೊಟ್ಟರು.

ಐಮಂಗಳದ ಹಿರಿಯ ವೈದ್ಯಾಧಿಕಾರಿ ಡಾ.ಯು.ಪ್ರಶಾಂತ ಕುಮಾರ್ ಮಾತನಾಡಿ, ಸದೃಢರಾಗಲು ಸ್ವಾಸ್ಥ ರಕ್ಷಣೆ ಮಾಡಿಕೊಳ್ಳಲು ನಿತ್ಯವೂ ಯೋಗಾಭ್ಯಾಸ ನಿರತರಾಲು ತಿಳಿಸಿದರು. ಭಾರತ್ ಸೌಟ್ಸ್ ಮತ್ತು ಗೈಡ್ಸ್‌ನ ಕಮಿಷನರ್ ಸವಿತಾ ಶಿವಕುಮಾರ್ ಅವರು ಶಿಸ್ತು ಮತ್ತು ಸಂಯಮಗೊಳಿಸಲು ಯೋಗಾಭ್ಯಾಸ ಸಹಕಾರಿಯಾಗುತ್ತದೆ ಎಂದರು. ಈ ಸಂದರ್ಭದಲ್ಲಿ ಎಸ್‌ಜೆಎಂ ಸಮೂಹ ಶಾಲೆಗಳ ಮುಖ್ಯ ಶಿಕ್ಷಕಿ ಪರಂಜ್ಯೋತಿ, ಉಪ ಮುಖ್ಯ ವೈದ್ಯಾಧಿಕಾರಿ ಎಂ.ಎಸ್.ಜಗದೀಶ್, ಜಿಲ್ಲಾ ಸ್ಕೌಟ್ಸ್ ಮತ್ತು ಗೈಡ್ಸ್‌ನ ಕೋ ಆರ್ಡಿನೇಟರ್ ಆರ್.ಪಾಟೀಲ್, ಶಾಲಾ ಶಿಕ್ಷಕಿಯರು ಇದ್ದರು. ಯೋಗ ತರಬೇತುದಾರ ರವಿ ಅಂಬೇಕರ್ ಮಕ್ಕಳಿಗೆ ಯೋಗಾಭ್ಯಾಸ ಮಾಡಿಸಿದರು.

**ಮಕ್ಕಳ ಆಯೋಗದ ಸದಸ್ಯ ಡಾ.ತಿಪ್ಪೇಸ್ವಾಮಿ ಸೂಚನೆ**

## ಬಾಲ ಗರ್ಭಿಣಿಯರ ರಕ್ಷಣೆಗೆ ಸೂಕ್ತ ಕ್ರಮ ವಹಿಸಿ



» **ಚಿತ್ರದುರ್ಗ**

ಜಿಲ್ಲೆಯಲ್ಲಿ 2023–24ನೇ ಸಾಲಿನಲ್ಲಿ 302 ಹಾಗೂ 2024–25 ನೇ ಸಾಲಿನಲ್ಲಿ ಇದುವರೆಗೂ 28 ಬಾಲಗರ್ಭಿಣಿಯರ ಪ್ರಕರಣಗಳು ಬೆಳಕಿಗೆ ಬಂದಿರುವುದು ಕಳವಕಾರಿ ಸಂಗತಿಯಾಗಿದೆ. ಎಲ್ಲಾ ಜಿಲ್ಲಾ ಮಟ್ಟದ ಅಧಿಕಾರಿಗಳು ಬಾಲ ಗರ್ಭಿಣಿಯರ ರಕ್ಷಣೆ ಮಾಡುವ ಕೆಲಸ ಮಾಡಬೇಕು ಎಂದು ರಾಜ್ಯ ಮಕ್ಕಳ ಆಯೋಗದ ಸದಸ್ಯ ಡಾ.ಕೆ.ಟಿ.ತಿಪ್ಪೇಸ್ವಾಮಿ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಶುಕ್ರವಾರ, ಜಿಲ್ಲಾ ಮಕ್ಕಳ ರಕ್ಷಣಾ ಸಮಿತಿ ಪ್ರಗತಿ ಪರಿಶೀಲನಾ ಸಭೆ ನಡೆಸಿ ಮಾತನಾಡಿದರು. ಜಿಲ್ಲೆಯ ಎಲ್ಲಾ ಶಾಲೆ ಕಾಲೇಜು, ಹಾಸ್ಟೆಲ್ ಗೋಡೆಗಳ ಮೇಲೆ ಕಡ್ಡಾಯವಾಗಿ ಮಕ್ಕಳ ಸಹಾಯವಾಣಿ ಸಂಖ್ಯೆ 1098 ಗೋಡೆ ಬರಹ ಬರೆಸಬೇಕು. ಬಾಲ್ಯ ವಿವಾಹ ನಿಷೇದ ಕಾಯ್ದೆ, ಪೋಕ್ಸೋ ಹಾಗೂ ಮಕ್ಕಳ ರಕ್ಷಣೆ ವಿಷಯಗಳ ಕುರಿತು ಮಕ್ಕಳಲ್ಲಿ ಅರಿವು ಮೂಡಿಸಲು ಕಾರ್ಯಕ್ರಮ ಆಯೋಜಿಸುವಂತೆ ಅಧಿಕಾರಿಗಳಿಗೆ ನಿರ್ದೇಶಿಸಿದರು.

ಸಭೆಯಲ್ಲಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳ 2023–24ನೇ ಸಾಲಿನ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನೆ ನಡೆಸಲಾಯಿತು. ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಜಿ.ಪಂ.ಸಿಇಓ ಎಸ್.ಜೆ.ಸೋಮಶೇಖರ್, ಪೊಲೀಸ್ ವರಿಷ್ಠಾಧಿಕಾರಿ ಧರ್ಮೇಂದ್ರ ಕುಮಾರ್ ಮೀನಾ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ರೇಣುಪ್ರಸಾದ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕಿ ಭಾರತಿ ಬಣಕಾರ್, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸವಿತ.ಸಿ ಉಪಸ್ಥಿತರಿದ್ದರು.

## ಕಾಳಿಕಾಂಬ ದೇವರಿಗೆ ದೊಡ್ಡ ಎಡೆ ಪೂಜೆ

**ಹಿರಿಯೂರು:** ನಗರದ ದಕ್ಷಿಣ ಕಾಶಿ ಶ್ರೀ ತೇರು ಮಲ್ಲೇಶ್ವರ ಸ್ವಾಮಿ ದೇವಾಲಯದ ಆವರಣದಲ್ಲಿ ನೆಲೆಸಿರುವ ಶ್ರೀ ಕಾಳಿಕಾಂಬ ದೇವತೆಗೆ ನಡೆದ ಜಾತ್ರೆಯ ತಿಂಗಳಿನ ವಿಶೇಷವಾದ ದೊಡ್ಡ ಎಡೆ ಪೂಜೆ ಹಾಗೂ ಲೋಕಕಲ್ಯಾಣಕ್ಕಾಗಿ ವಿಶೇಷ ಪೂಜಾ ಕಾರ್ಯಕ್ರಮ ಗಳನ್ನು ಭಕ್ತಿ ಭಾವದಿಂದ ಆಚರಿಸಲಾಯಿತು. ಇದರ ಅಂಗವಾಗಿ ಕಾಳಿಕಾಂಬ ದೇವರಿಗೆ ಪುಷ್ಪಾರ್ಚನೆ, ಅಭಿಷೇಕ ಎಲೆ ಪೂಜೆ ಹೂವಿನ ಅಲಂಕಾರ ಏರ್ಪಡಿಸಲಾಗಿತ್ತು. ಮಹಾ ಮಂಗಳಾರತಿ ನಂತರ ತೀರ್ಥ ಪ್ರಸಾದ ವಿನಿಯೋಗ ಹಾಗೂ ಅನ್ನದಾಸೋಹ ಕಾರ್ಯಕ್ರಮ ನಡೆಯಿತು. ವಿಶ್ವಕರ್ಮ ಸಮಾಜದ ಮುಖಂಡರು ಸಮಾಜ ಬಾಂಧವರು ಸೇರಿದಂತೆ ನಗರದ ಅನೇಕ ಭಕ್ತರು ಪೂಜಾ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

## ಪ್ರಮುಖ ಸುದ್ದಿ

**ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಸೂಚನೆ**

# ದೇವರ ಎತ್ತುಗಳ ನಿರ್ವಹಣೆಗೆ ಟ್ರಸ್ಟ್ ರಚನೆಗೆ ಪ್ರೇರೇಪಿಸಿ

» **ಚಿತ್ರದುರ್ಗ**

ಚಳ್ಳಕೆರೆ ಹಾಗೂ ಮೊಳಕಾಲ್ಮೂರು ತಾಲ್ಲೂಕುಗಳಲ್ಲಿ ದೇವರ ಎತ್ತುಗಳು ಹೆಚ್ಚಾಗಿವೆ.ಈಜಾನುವಾರುಗಳನಿರ್ವಹಣೆಗೆ ಟ್ರಸ್ಟ್ ರಚನೆ ಮಾಡಲು ಪ್ರೇರೇಪಿಸುವಂತೆ ಪಶು ಇಲಾಖೆ ಅಧಿಕಾರಿಗಳಿಗೆ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಶುಕ್ರವಾರ, ಜಿಲ್ಲಾ ಪ್ರಾಣಿ ದಯಾ ಸಂಘದ ನಿರ್ವಹಣಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ದೇವರ ಎತ್ತುಗಳ ಗೋಶಾಲೆಗಳಲ್ಲಿ ಇರದ ಕಾರಣ, ಬರಗಾಲದ ಸಂದರ್ಭದಲ್ಲಿ ಇವುಗಳಿಗೆ ಮೇವು ಹಾಗೂ ಕುಡಿಯುವ ನೀರಿನ ಅನುದಾನ ಒದಗಿಸಲು ಬರುವುದಿಲ್ಲ. ಇದರ ಬದಲು ಗ್ರಾಮಸ್ಥರು 50ಕ್ಕಿಂತಲೂ ಹೆಚ್ಚಿನ ದೇವರ ಎತ್ತುಗಳನ್ನು ಒಳಗೊಂಡತೆ ಟ್ರಸ್ಟ್ ರಚಿಸಿ, ನಿರ್ವಹಣೆ ಹೊಣೆ ವಹಿಸಿಕೊಂಡರೆ, ಸರ್ಕಾರದಿಂದ ಪ್ರತಿ ಗೋವಿಗೂ ವಾರ್ಷಿಕ ನಿರ್ವಹಣೆ ವೆಚ್ಚವಾಗಿ ರೂ.11,000ಗಳ ಅನುದಾನ ಲಭಿಸಲಿದೆ. ಚಳ್ಳಕೆರೆ ಹಾಗೂ ಮೊಳಕಾಲ್ಮೂರು ತಹಶೀಲ್ದಾರಿಗೆ ಈ ಕುರಿತು ಸೂಚನೆ ನೀಡುತ್ತೇನೆ. ಪಶು ಇಲಾಖೆ ಅಧಿಕಾರಿಗಳು ಟ್ರಸ್ಟ್ ರಚನೆ ಪ್ರೇರೇಪಣಾ ಕಾರ್ಯದಲ್ಲಿ ತೊಡಗಿಕೊಳ್ಳಬೇಕು ಎಂದರು.

**ಅಕ್ರಮ ಪ್ರಾಣಿ ವಧೆಗೆ ಕಡಿವಾಣ ಹಾಕಿ :** ಜೂನ್ 17 ರಂದು ಬಕ್ರೀದ್ ಹಬ್ಬದ ಆಚರಣೆ ಇದೆ. ಈ ಸಂದರ್ಭದಲ್ಲಿ ಅಕ್ರಮವಾಗಿ ಒಂಟೆ ಹಾಗೂ ಗೋವುಗಳನ್ನು ವಧೆ ಮಾಡದಂತೆ ಕಠಿಣ ಕ್ರಮಗಳನ್ನು ಕೈಗೊಳ್ಳಬೇಕು. ನಗರ ಸಭೆ ಹಾಗೂ ಪೊಲೀಸ್ ಅಧಿಕಾರಿಗಳು ಪ್ರಾಣಿ ದಯಾ ಸಂಘದಿಂದ, ಪ್ರಾಣಿಗಳ ಅಕ್ರಮ ವಧೆ ಕುರಿತು ದೂರ ಕೇಳಿಬಂದರೆ ತಕ್ಷಣವೇ ಕ್ರಮ ಕೈಗೊಳ್ಳಬೇಕು. ನಗರ ವ್ಯಾಪ್ತಿಯಲ್ಲಿ ಕಸಾಯಿಖಾನೆಗಳಿಗೆ ನಗರಸಭೆ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಬೇಕು. ಅಕ್ರಮವಾಗಿ ಪ್ರಾಣಿ ವಧೆ ಮಾಡುವುದಕ್ಕೆ ಕಡಿವಾಣ ಹಾಕಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.



ಬಕ್ರಿದ್ ಅಂಗವಾಗಿ 13 ವರ್ಷ ದಾಟಿದ ಪ್ರಾಮಾಣೀಕರಿಸಿದ ಎಮ್ಮೆ ಹಾಗೂ ಕೋಣಗಳನ್ನು ಮಾತ್ರ ವಧಿಸಬಹುದಾಗಿದೆ. ಗೋವು ಹಾಗೂ ಒಂಟೆ ವಧೆಯನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ. ಉಳಿದಂತೆ ಕುರಿ,ಮೇಕೆಗಳ ವಧೆಗೆ ನಿರ್ಬಂಧವಿಲ್ಲ ಎಂದು ಪಶುವೈದ್ಯಕೀಯ ಹಾಗೂ ಸೇವಾ ಇಲಾಖೆ ಉಪನಿರ್ದೇಶಕಿ ಡಾ.ಇಂದಿರಾಬಾಯಿ ಹೇಳಿದರು.

ಪ್ರಾಣಿ ದಯಾ ಸಂಘದ ನವೀಕರಣ : ಸಭೆಯಲ್ಲಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅಧ್ಯಕ್ಷತೆಯಲ್ಲಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ, ಜಿ.ಪಂ.ಸಿಇಓ, ಅಪರ ಜಿಲ್ಲಾಧಿಕಾರಿ, ಅರಣ್ಯ ಸಂರಕ್ಷಣಾಧಿಕಾರಿ, ನಗರ ಸಭೆ ಪೌರಾಯುಕ್ತೆ, ಡಿ.ಡಿ.ಪಿ.ಐ, ಪ್ರಾದೇಶಿಕ ಸಾರಿಗೆ ಅಧಿಕಾರಿ, ಪಾಲಿ ಕ್ಲೀನಿಕ್ ಉಪನಿರ್ದೇಶಕ ಹಾಗೂ ಪಶು ಇಲಾಖೆ ಉಪನಿರ್ದೇಶಕರನ್ನು ಒಳಗೊಂಡ ಜಿಲ್ಲಾ ಮಟ್ಟದ ಪ್ರಾಣಿ ದಯಾ ಸಂಘದ ನವೀಕರಣಕ್ಕೆ ಅನುಮತಿ ನೀಡಲಾಯಿತು.

ಬಿಡಾಡಿ ದನಗಳಿಗೆ ಮಾರಕವಾದ ಪ್ಲಾಸ್ಟಿಕ್ : ನಗರ ಪ್ರದೇಶದ ರಸ್ತೆ, ಮಾರುಕಟ್ಟೆ ಸೇರಿದಂತೆ ಎಲ್ಲೆಂದರಲ್ಲಿ ಬಿಡಾಡಿ ಓಡಾಡುವ ದನ ಕರುಗಳನ್ನು ಸರ್ಕಾರಿ ಗೋಶಾಲೆಗಳಿಗೆ ಕಳುಹಿಸುವ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು. ಸರ್ಕಾರದಿಂದ ಜಿಲ್ಲೆಯಲ್ಲಿ 1 ಗೋಶಾಲೆ ಮಾತ್ರ ನಡೆಸಲಾಗುತ್ತಿದೆ. ಇದರಲ್ಲಿ ಈಗಾಗಲೇ 81 ಜಾನುವಾರುಗಳು ಆಶ್ರಯ ಪಡೆದಿವೆ. ನಗರದ ತಿಪ್ಪೆಗುಂಡಿಗಳಲ್ಲಿ ಹರಡಿರುವ ಪ್ಲಾಸ್ಟಿಕ್ ತಿನ್ನುವ ಬಿಡಾಡಿ ದನಗಳು ಗೋಶಾಲೆಗೆ ದಾಖಲಾದರೆ, ಅವುಗಳ ಜೀವನ ಸುಗಮವಾಗುವುದರ ಬದಲು, ಸಾವಿಗೆ ಈಡಾಗುವ ಪ್ರಸಂಗ ಉಂಟಾಗುತ್ತಿದೆ. ನಗರದಲ್ಲಿ ಎಲ್ಲಾ ವಯಸ್ಕ ಗೋವುಗಳ ಜಠರಗಳಲ್ಲಿ ಪ್ಲಾಸ್ಟಿಕ್ ಸೇರ್ಪಡೆಯಾಗಿದ್ದು, ಗೋವುಗಳು ಮೇವು ತಿಂದ ನಂತರ, ದೇಹದಲ್ಲಿನ ಪ್ಲಾಸ್ಟಿಕ್‌ನಿಂದ ತೊಂದರೆ ಅನುಭವಹಿಸಿ ಅಸುನೀಗುತ್ತಿವೆ. ಇದು ಪಶು ಇಲಾಖೆ ವೈದ್ಯಾಧಿಕಾರಿಗಳನ್ನು ಚಿಂತೆಗೆ ಈಡುಮಾಡಿದೆ. ಗೋವುಗಳ ಹೊಟ್ಟೆ ಸೇರಿದ ಪ್ಲಾಸ್ಟಿಕ್‌ನ್ನು ಅಪರೇಷನ್ ಮಾಡಿ ಹೊರತೆಗದರೂ ಗೋವುಗಳು ಗುಣಮುಖವಾಗದೆ ಮತ್ತೆ ಸಾವಿನ ಕಡೆ ಸಾಗುತ್ತಿವೆ. ಈ ಕುರಿತು ಪಶು ಇಲಾಖೆ ವೈದ್ಯಾಧಿಕಾರಿಗಳು ಸಂಪೂರ್ಣ ಅಧ್ಯಯನ ವರದಿಯ್ನನು ಸಿದ್ದಪಡಿಸಿ ಪ್ರಾಣಿ ದಯಾ ಸಂಘಕ್ಕೆ ನೀಡುವಂತೆ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಸಭೆಯಲ್ಲಿ ನಿರ್ದೇಶನ ನೀಡಿದರು. ವಯಸ್ಕ ಗೋವುಗಳ ಬದಲಿಗೆ ಸಣ್ಣ ಕರುಗಳನ್ನು ಮುಂಜಾಗೃತ ಕ್ರಮವಾಗಿ ಗೋಶಾಲೆಗಳಿಗೆ ದಾಖಲಿಸುವಂತೆ ತಿಳಿಸಿದರು.

ಸಾಮಾಜಿಕ ಹೊಣೆಗಾರಿಕೆ ನಿಧಿಯಡಿ ಗೋಶಾಲೆ ನಿರ್ಮಾಣ : ಜಿಲ್ಲೆಯ ವಿವಿಧ ಕಂಪನಿಗಳ ಸಾಮಾಜಿಕ ಹೊಣೆಗಾರಿಕೆ ನಿಧಿಯಡಿ ಸರ್ಕಾರಿ ಗೋಶಾಲೆಗಳನ್ನು ನಿರ್ಮಿಸಲು ಯೋಜನಾ ವರದಿ ನೀಡುವಂತೆ ಪಶು ಇಲಾಖೆ ಅಧಿಕಾರಿಗಳಿಗೆ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಸೂಚನೆ ನೀಡಿದರು. ಸಭೆಯಲ್ಲಿ ಸರ್ಕಾರಿ ಗೋಶಾಲೆಯ ಸಗಣಿ ವಿಲೇವಾರಿ, ಹೆಚ್ಚುವರಿ ಗೋಶಾಲೆಗಳ ನಿರ್ಮಾಣ, ಗೋಶಾಲೆಗಳಲ್ಲಿ ಡಿ ದರ್ಜೆ ನೌಕರರ ನೇಮಕ, ಜಿಲ್ಲಾ ಜಾನುವಾರು ಮಾರುಕಟ್ಟೆ ಮೇಲ್ವಿಚಾರಣೆ ಸಮಿತಿ ಹಾಗೂ ವಿವಿಧ ಸಂಘ ಸಂಸ್ಥೆಗಳ ಅಡಿ ಜಿಲ್ಲೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪಿಂಜಾರ್ ಪೋಲ್ ಹಾಗೂ ಇತರೆ ಗೋಶಾಲೆಗಳಿಗೆ ಬೆಂಬಲ ನೀಡುವ ಕಾರ್ಯಕ್ರಮಗಳ ಪ್ರಸ್ತಾವನೆಗಳನ್ನು ಬಗ್ಗೆ ಚರ್ಚಿಸಿ ನಿರ್ಣಯ ಕೈಗೊಳ್ಳಲಾಯಿತು. ನಗರ ಸಭೆ ಪೌರಾಯುಕ್ತೆ ಎಂ.ರೇಣುಕಾ, ಪ್ರಾದೇಶಿಕ ಸಾರಿಗೆ ಅಧಿಕಾರಿ ಭರತ್ ಎಂ ಕಾಳೆ ಸಿಂಘೆ, ಪಾಲಿ ಕ್ಲಿನಿಕ್ ಉಪನಿರ್ದೇಶಕ ಎನ್. ಕುಮಾರ್, ಜಿಲ್ಲಾ ಪ್ರಾಣಿ ಕಲ್ಯಾಣಾಧಿಕಾರಿ ಹಾಗೂ ವಕೀಲ ದೇವಿಪ್ರಸಾದ್ ಸೇರಿದಂತೆ ಇತರೆ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಕೃತಕ ಉತ್ಪಾದನೆ ಅಸಾಧ್ಯ, ಜೀವ ಉಳಿಸಲು ವರ್ಷಕ್ಕೊಂದು ಬಾರಿಯಾದರೂ ರಕ್ತದಾನ ಮಾಡೋಣ; ಡಾ; ಗೀತಾ




» **ದಾವಣಗೆರೆ**

ತುರ್ತು ಸಂದರ್ಭದಲ್ಲಿ ಜೀವಗಳನ್ನುಳಿಸಲು ರಕ್ತದ ಅವಶ್ಯಕತೆ ಇರುತದೆ. ಈ ರಕ್ತವನ್ನು ಯಾರು ಕೃತಕವಾಗಿ ತಯಾರಿಸಲು ಸಾಧ್ಯವಿಲ್ಲ, ಹಾಗಾಗಿ ವರ್ಷಕ್ಕೆ ಕನಿಷ್ಠ ಒಂದು ಬಾರಿಯಾದರೂ ಎಲ್ಲರೂ ರಕ್ತದಾನ ಮಾಡುವ ಮೂಲಕ ಮಾನವೀಯತೆ ಮೆರೆಯಬೇಕೆಂದು ಆಡಳಿತಾ ವೈದ್ಯಾಧಿಕಾರಿ ಡಾ.ಗೀತಾ ಹೇಳಿದರು. ಶುಕ್ರವಾರ ನಗರದ ಚಿಗಟೇರಿ ಜಿಲ್ಲಾ ಆಸ್ಪತ್ರೆಯಲ್ಲಿ ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕರ್ನಾಟಕ ರಾಜ್ಯ ಏಡ್ಸ್ ಪ್ರಿವೆಂಷನ್ ಸೊಸೈಟಿ, ಜಿಲ್ಲಾ ಏಡ್ಸ್ ಪ್ರತಿಬಂಧಕ ಮತ್ತು ನಿಯಂತ್ರಣ ಘಟಕ, ಜಿಲ್ಲೆಯ ವಿವಿಧ ರಕ್ತ ಕೇಂದ್ರಗಳು, ಜಿಲ್ಲಾ ಆರ್.ಆರ್.ಸಿ ಕಾಲೇಜುಗಳು ಹಾಗೂ ವಿವಿಧ ಸ್ವಯಂ ಸೇವಾ ಸಂಘ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ ವಿಶ್ವ ಸ್ವಯಂಪ್ರೇರಿತ ರಕ್ತದಾನಿಗಳ ದಿನಾಚರಣೆಯನ್ನು ಉದ್ಘಾಟಿಸಿ ಮಾತನಾಡಿದರು. ರಕ್ತದಾನದ ಬಗ್ಗೆ ಜನರಲ್ಲಿ ಅರಿವು ಮೂಡಿಸುವ ಸಲುವಾಗಿ ವಿಶ್ವ ರಕ್ತದಾನಿಗಳ ದಿನಾಚರಣೆಯನ್ನು ಆಚರಿಸಲಾಗುತ್ತದೆ, ದಾನದಲ್ಲಿ ಅತಿ ಶ್ರೇಷ್ಠ ದಾನ ರಕ್ತದಾನವೇ ಆಗಿದೆ. ಇದನ್ನು 2005 ರಿಂದ ರಕ್ತದಾನ ದಿನಾಚರಣೆಯನ್ನಾಗಿ ಆಚರಿಸಲಾಗುತ್ತದೆ. ರಕ್ತವನ್ನು ಯಾರು ಕೃತಕವಾಗಿ ತಯಾರಿಸಲು ಸಾಧ್ಯವಿಲ್ಲ, ಎಲ್ಲರೂ ರಕ್ತದ ಮಹತ್ವವನ್ನು ತಿಳಿದು ರಕ್ತದಾನಕ್ಕೆ ಮುಂದಾಗಬೇಕು ಎಂದರು. ರಕ್ತದಾನ ಮಾಡುವುದರಿಂದ ರಕ್ತದಾನಿಗಳು ಆರೋಗ್ಯವಾಗಿರುತ್ತಾರೆ. ಕೆಲವರು ಅಪಘಾತ ದಿಂದ ಚಿಕಿತ್ಸೆ ಪಡೆಯುವವರಿಗೆ ಹಾಗೂ ಗರ್ಭಿಣಿ ಮಹಿಳೆಯರಿಗೆ ತುರ್ತಾಗಿ ರಕ್ತ ಬೇಕಾಗುತ್ತದೆ, ಅಂತಹ ಸಮಯದಲ್ಲಿ ರಕ್ತದ ಅವಶ್ಯವಾಗಿದ್ದು, 18 ರಿಂದ 60 ರ ವಯಸ್ಕರು ವರ್ಷಕ್ಕೆ ಕನಿಷ್ಠ ಒಂದು ಬಾರಿಯಾದರೂ ರಕ್ತದಾನವನ್ನು ಮಾಡುವಂತೆ ಪ್ರತಿಜ್ಞೆ ಮಾಡೋಣ ಎಂದು ಹೇಳಿದರು. ವಿಶ್ವದೆಲ್ಲೆಡೆ ಮನುಷ್ಯನಿಗೆ ಎರಡು ರೀತಿಯ ಪರಿಸ್ಥಿತಿಗಳಲ್ಲಿ ರಕ್ತದ ಅವಶ್ಯಕತೆ ಇರುತ್ತದೆ. ಮೊದಲನೆಯದಾಗಿ ತುರ್ತು ಪರಿಸ್ಥಿತಿಗಳಲ್ಲಿ ಅಂದರೆ, ಅಪಘಾತ, ಪ್ರಕೃತಿ ವಿಕೋಪಗಳು, ಹೆಣ್ಣು ಮಕ್ಕಳ ಪ್ರಸೂತಿ ಸಮಯ ಮತ್ತಿತರ ಸ್ತ್ರೀರೋಗ ಶಸ್ತ್ರಚಿಕಿತ್ಸೆಗಳು, ಎರಡನೆಯದಾಗಿ ರಕ್ತಸಂಬಂಧಿ ಖಾಯಿಲೆಗಳಾದ ತಲಸ್ಸೀಮಿಯಾ, ಹಿಮೋಫಿಲಿಯಾ, ಸಿಕಲ್ ಸೆಲ್ ಅನಿಮೀಯ ಮುಂತಾದವುಗಳು. ಈ ಎರಡೂ ಪರಿಸ್ಥಿತಿಗಳಲ್ಲಿ ನವಜಾತ ಶಿಶುಗಳಿಂದ ದೊಡ್ಡವರವರೆಗಿನ ಎಲ್ಲಾ ವಯೋಮಾನದವರಿಗೂ ಸುರಕ್ಷಿತ ರಕ್ತದ ಅವಶ್ಯಕತೆ ಇರುತ್ತದೆ. ಹೀಗೆ ಅತ್ಯಾವಶ್ಯಕವಾಗಿರುವ ರಕ್ತ ಮತ್ತು ರಕ್ತದ ಉತ್ಪನ್ನವನ್ನು ಕೃತಕವಾಗಿ ಸೃಷ್ಟಿಮಾಡಲು ಸಾಧ್ಯವಿಲ್ಲ. ಈ ವೇಳೆ ರಕ್ತದಾನಿಯೊಬ್ಬನೇ ಆಪದ್ಬಾಂಧವನಾಗಿರುತ್ತಾನೆ, ಆದ್ದರಿಂದ ಎಲ್ಲರು ರಕ್ತದಾನ ಮಾಡಬೇಕು ಎಂದು ಹೇಳಿದರು. ಇದೇ ವೇಳೆ ಸ್ವಯಂ ಪ್ರೇರಿತ ರಕ್ತದಾನಿಗಳಿಗೆ ಪ್ರಶಸ್ತಿಪತ್ರ ಪ್ರದಾನ ಮಾಡಲಾಯಿತು. ರಕ್ತದಾನ ಮಾಡುವುದರಿಂದ ಹೃದಯಾಘಾತದ ಸಂಭವ ಕಡಿಮೆಯಾಗುತ್ತದೆ, ಕೊಬ್ಬಿನ ಅಂಶ ಕಡಿಮೆಯಾಗುತ್ತದೆ,ಹೊಸರಕ್ತಉತ್ಪಾದನೆಗೊಂಡು, ಚುರುಕುತನ, ಜ್ಞಾಪನಶಕ್ತಿ ವೃದ್ಧಿಯಾಗುವುದು, ಗಂಡಸರು 3 ತಿಂಗಳಿಗೊಮ್ಮೆ, ಹೆಂಗಸರು 4 ತಿಂಗಳಿಗೊಮ್ಮೆ ರಕ್ತದಾನ ಮಾಡಬಹುದು.ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಮಹಾವೀರ.ಮ.ಕರೆಣ್ಣವರ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್.ಬಿ.ಇಟ್ನಾಳ್ ಜಾಥಾಕ್ಕೆ ಹಸಿರು ನಿಶಾನೆ ತೋರುವುದರ ಮೂಲಕ ಚಾಲನೆ ನೀಡಿದರು.ಜಾಥಾ ಚಿಗಟೇರಿ ಜಿಲ್ಲಾ ಆಸ್ಪತ್ರೆಯಿಂದ ಆರಂಭವಾಗಿ ವಿದ್ಯಾರ್ಥಿಭವನ ಸರ್ಕಲ್, ಕೆಇಬಿ ಸರ್ಕಲ್, ಚೇತನ ಹೋಟೆಲ್, ಮೋತಿ ವೀರಪ್ಪ ಕಾಲೇಜ್ ಮೂಲಕ ಸಿ.ಜಿ.ಆಸ್ಪತ್ರೆಗೆ ಬಂದು ಮುಕ್ತಾಯಗೊಳ್ಳಲಾಯಿತು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ; ಷಣ್ಮುಖಪ್ಪ, ಜಿಲ್ಲಾ ಸರ್ಜನ್ ಡಾ.ನಾಗೇಂದ್ರಪ್ಪ, ಆರ್.ಸಿ.ಹೆಚ್ ಅಧಿಕಾರಿ ಡಾ; ರೇಣುಕಾರಾಧ್ಯ, ಜಿಲ್ಲಾ ಆಸ್ಪತ್ರೆಯ ಅಧೀಕ್ಷಕರಾದ ಡಾ.ಮಧು, ನಿವಾಸಿ ವೈದ್ಯಾಧಿಕಾರಿ ಡಾ.ಮುರುಳೀಧರ್, ತಾಲ್ಲೂಕು ಆರೋಗ್ಯಾಧಿಕಾರಿ ಡಾ.ದೇವರಾಜ್, ಸ್ವಯಂ ಪ್ರೇರಿತ ರಕ್ತದಾನಿಗಳು, ಶುಶ್ರೂಷಕ ಕಾಲೇಜಿನ ವಿದ್ಯಾರ್ಥಿಗಳು, ಚಿಗಟೇರಿ ಜಿಲ್ಲಾ ಆಸ್ಪತ್ರೆಯ ಸಿಬ್ಬಂಧಿ ವರ್ಗದವರು ಸೇರಿದಂತೆ ಹಲವಾರು ಜನರು ಇದ್ದರು.

# ಜಲಜೀವನ್ ಮಿಷನ್ 8 ಕಾಮಗಾರಿಗಳಿಗೆ ಪೈಪ್‌ಲೈನ್, ನಲ್ಲಿ ಅಳವಡಿಕೆ ಕಾಮಗಾರಿಗಳಿಗೆ ಸಮಿತಿ ಅನುಮೋದನೆ

» **ದಾವಣಗೆರೆ**

ಗ್ರಾಮೀಣ ಪ್ರದೇಶದ ಜನರಿಗೆ ಶುದ್ಧ ಕುಡಿಯುವ ನೀರು ಪೂರೈಕೆ ಮಾಡುವ ಜವಾಬ್ದಾರಿ ಆಯಾ ಗ್ರಾಮ ಪಂಚಾಯಿತಿ ಅಭಿವೃದ್ದಿ ಅಧಿಕಾರಿ ಹಾಗೂ ಕಿರಿಯ ಇಂಜಿನಿಯರ್‌ಗಳ ಜವಾಬ್ದಾರಿಯಾಗಿದ್ದು ಕಲುಷಿತನೀರುಪೂರೈಕೆಯಾದಲ್ಲಿ ಇವರನ್ನೆ ಒಣೆಗಾರರನ್ನಾಗಿ ಮಾಡಲಾಗುತ್ತದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ.ಇಟ್ನಾಳ್ ತಿಳಿಸಿದರು.

ಅವರು ಗುರುವಾರ ಜಿಲ್ಲಾ ಪಂಚಾಯತ್‌ನಲ್ಲಿ ನಡೆದ ನೀರು ಮತ್ತು ನೈರ್ಮಲ್ಯ ಸಮಿತಿ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಜಿಲ್ಲೆಯಲ್ಲಿ ಜಲಜೀವನ್ ಮಿಷನ್ ಯೋಜನೆಯಡಿ 4 ನೇ ಹಂತದ ಕಾಮಗಾರಿಗಳು ನಡೆಯುತ್ತಿದ್ದು ಮನೆ ಮನೆಗೂ ನಲ್ಲಿಯನ್ನು ಅಳವಡಿಸುವ ಮೂಲಕ ನೀರು ಪೂರೈಕೆ ಮಾಡಲಾಗುತ್ತಿದೆ. ಈಗಾಗಲೇ ಜಲಜೀವನ್ ಮಿಷನ್ ಯೋಜನೆಯಡಿ ಗ್ರಾಮಗಳಲ್ಲಿ ಪೈಪ್ ಅಳವಡಿಸಲಾಗಿದ್ದು ಮನೆ ಮನೆಗೆ ನಲ್ಲಿ ಸಂಪರ್ಕಕ್ಕೆ ಸಿವಿಪಿವಿಸಿ ಪೈಪ್ ಅಳವಡಿಕೆಗೆ ಸಿಸಿ ರಸ್ತೆ ಕಟ್ಟಿಂಗ್ ಮಾಡಲು ಮತ್ತು ಕೊಳವೆಬಾವಿಯಿಂದ ನೀರಿನ ಪೈಪ್‌ಲೈನ್ ಅಳವಡಿಕೆ ಮಾಡಲು 8 ಕಾಮಗಾರಿಗಳಿಗೆ ಸಮಿತಿಯು ಅನುಮೋದನೆ ನೀಡಿದೆ ಎಂದರು.



ಸಮಿತಿಯ ಮುಂದೆ 13 ಗ್ರಾಮಗಳಲ್ಲಿ ಸಿಸಿ ರಸ್ತೆ ಕಟಿಂಗ್ ಮಾಡಿ ನಲ್ಲಿ ಅಳವಡಿಕೆ, ಪೈಪ್‌ಲೈನ್ ಅಳವಡಿಕೆ, ಓವರ್‌ಹೆಡ್ ಟ್ಯಾಂಕ್‌ಗಳ ದುರಸ್ಥಿ ಕಾಮಗಾರಿಗೆ ಅನುಮೋದನೆ ನೀಡಲು ಪರಿಶೀಲಿಸಲಾಯಿತು. ಕೆಲವು ಕಾಮಗಾರಿಗಳು ಯೋಜಿತ ಕಾಮಗಾರಿಗಿಂತ ಅಂದಾಜು ಮೊತ್ತ ಹೆಚ್ಚಿದ್ದು ಸ್ಥಳ ಮಹಜರು ಮಾಡಿದ ನಂತರ ಅನುಮೋದನೆ ನೀಡಲು ಸಮಿತಿ ತೀರ್ಮಾನಿಸಿತು.

ಅನುಮೋದಿತ ಕಾಮಗಾರಿಗಳಲ್ಲಿ ನಲ್ಲಿ ಅಳವಡಿಕೆ, ವಿತರಣಾ ಪೈಪ್, ಟ್ಯಾಂಕ್ ರಿಪೇರಿ ಕೈಗೊಳ್ಳಲಾಗುತ್ತದೆ. ಅನುಮೋದನೆ ನೀಡಿದ ಗ್ರಾಮಗಳ ವಿವರ; ಹೆಬ್ಬಾಳ, ಕಾಟೀಹಳ್ಳಿ, ನೀರ್ಥಡಿ ದ್ಯಾಮೇನಹಳ್ಳಿ, ಶ್ರೀರಾಮನಗರ ಆಲೂರಟ್ಟಿ, ಸಿದ್ದನೂರು, ಕೆರೆಯಾಗಲಹಳ್ಳಿ, ಅವರಗೊಳ್ಳ ಈ ಗ್ರಾಮಗಳ ಕಾಮಗಾರಿಗೆ ಅನುಮೋದನೆ ನೀಡಿ ಬೇತೂರು, ಗುಮ್ಮನೂರು ಕದರಪ್ಪನಹಟ್ಟಿ, ಗೊಲ್ಲರಹಳ್ಳಿ, ಹೊನ್ನೂರು, ಕಕ್ಕರಗೊಳ್ಳ ಆಂಜೆನೇಯ ಬಡಾವಣೆ ಇಲ್ಲಿನ ಕಾಮಗಾರಿಗೆ ಸ್ಥಳ ಪರಿಶೀಲನೆ ಮಾಡಿ ಅನುಮೋದನೆ ನೀಡಲು ತೀರ್ಮಾನಿಸಲಾಯಿತು.

ಕುಡಿಯುವ ನೀರಿನ ಪರೀಕ್ಷೆ ಆಂದೋಲನಕ್ಕೆ ಸೂಚನೆ; ಪಂಚಾಯಿತಿ ವ್ಯಾಪ್ತಿಯಲ್ಲಿನ ಗ್ರಾಮಗಳಿಗೆ ಪೂರೈಕೆ ಮಾಡುವ ಕುಡಿಯುವ ನೀರನ್ನು ಎಲ್ಲಾ ಹಂತದಲ್ಲಿ ಪರೀಕ್ಷೆಯನ್ನು ಕೈಗೊಳ್ಳಬೇಕಾಗಿದೆ. ಇದೊಂದು ಆಂದೋಲನದ ರೀತಿಯಲ್ಲಿ ಪಂಚಾಯಿತಿ ಅಭಿವೃದ್ದಿ ಅಧಿಕಾರಿಗಳು ಹಾಗೂ ಗ್ರಾಮೀಣ ನೀರು ಸರಬರಾಜು ವಿಭಾಗದ ಅಧಿಕಾರಿಗಳು ಮಾಡಬೇಕಾಗಿದೆ. ಕುಡಿಯುವ ನೀರಿನ ಪರೀಕ್ಷೆಗಾಗಿ ದಾವಣಗೆರೆ ಮತ್ತು ಚನ್ನಗಿರಿಯಲ್ಲಿ ಪ್ರಯೋಗಾಲಯಗಳಿವೆ. ಇಲ್ಲಿಗೆ ನೀರಿನ ಮಾದರಿಗಳನ್ನು ತೆಗೆದುಕೊಂಡು ಹೋಗಿ ಪರೀಕ್ಷೆ ಮಾಡಿಸಬೇಕು. ನೀರಿನ ಮೂಲ, ಪೈಪ್‌ಲೈನ್, ಟ್ಯಾಂಕ್‌ಗಳಲ್ಲಿನ ನೀರಿನ ಮಾದರಿಯನ್ನು ಸಂಗ್ರಹಿಸಿ ಪರೀಕ್ಷೆಗೆ ಒಳಪಡಿಸಬೇಕಾಗಿದೆ ಎಂದರು.

ಎಲ್ಲಾ ಗ್ರಾಮಗಳಲ್ಲಿ ಕುಡಿಯುವ ನೀರನ್ನು ಮುಂದಿನ ದಿನಗಳಲ್ಲಿ ಸತತವಾಗಿ ಒಂದು ವಾರಗಳ ಕಾಲ ಸಮಗ್ರವಾಗಿ ಪರಿಶೀಲನೆ ಮಾಡಿ ಪರೀಕ್ಷೆಗೆ ಒಳಪಡಿಸುವುದು, ಟ್ಯಾಂಕ್ ಸ್ವಚ್ಛ ಮಾಡಿ ಕ್ಲೋರಿನೇಷನ್ ಮಾಡಲು ಸೂಚನೆ ನೀಡಿ ಕಲುಷಿತ ನೀರು ಮಿಶ್ರಣವಾಗದಂತೆ ನೋಡಿಕೊಳ್ಳಬೇಕು. ಒಂದು ವೇಳೆ ಕಲುಷಿತ ಕುಡಿಯುವ ನೀರಿನ ಪ್ರಕರಣಗಳು ಕಂಡು ಬಂದಲ್ಲಿ ಪಂಚಾಯಿತಿ ಅಭಿವೃದ್ದಿ ಅಧಿಕಾರಿ ಮತ್ತು ಗ್ರಾಮೀಣ ಕುಡಿಯುವ ನೀರು ಪೂರೈಕೆ ವಿಭಾಗದ ಕಿರಿಯ ಇಂಜಿನಿಯರ್‌ನ್ನು ಒಣೆಗಾರರನ್ನಾಗಿ ಮಾಡಲಾಗುತ್ತದೆ ಎಂದರು.

ಜಾಗೃತಿ ಮೂಡಿಸಿ; ಗ್ರಾಮಾಂತರ ಪ್ರದೇಶದಲ್ಲಿ ವಾಹನಗಳ ಮೂಲಕ ಶುದ್ದ ಕುಡಿಯುವ ನೀರಿನ ಉಪಯೋಗದ ಬಗ್ಗೆ ಜಾಗೃತಿ ಮೂಡಿಸಬೇಕು. ಇದಕ್ಕಾಗಿ ಕರಪತ್ರ, ಜಿಂಗಲ್ಸ್‌ಗಳನ್ನು ಬಳಕೆ ಮಾಡಲು ತಿಳಿಸಿದರು.

ಸಭೆಯಲ್ಲಿ ಸಮಿತಿ ಸದಸ್ಯರಾದ ಹಿರಿಯ ಭೂ ವಿಜ್ಞಾನಿ ಬಸವರಾಜು, ವಾರ್ತಾ ಇಲಾಖೆ ಹಿರಿಯ ಸಹಾಯಕ ನಿರ್ದೇಶಕರಾದ ಧನಂಜಯ ಹಾಗೂ ಕಾರ್ಯಪಾಲಕ ಇಂಜಿನಿಯರ್ ಸೋಮ್ಲನಾಯ್ಕ್ ಉಪಸ್ಥಿತರಿದ್ದರು.

### ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಡಾ.ಕೆ.ಟಿ.ತಿಪ್ಪೇಸ್ವಾಮಿ ಅಭಿಮತ

# ಬಾಲ್ಯಾವಸ್ಥೆ ಗರ್ಭಧಾರಣೆ ತಡೆ: ನಮ್ಮೆಲ್ಲರ ಜವಾಬ್ದಾರಿ

» **ಚಿತ್ರದುರ್ಗ**

ಬಾಲ್ಯಾವಸ್ಥೆಯ ಗರ್ಭಧಾರಣೆ ತಡೆಗಟ್ಟುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ. ಈ ನಿಟ್ಟಿನಲ್ಲಿ ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರಗಳ ವೈದ್ಯಾಧಿಕಾರಿ ಹಾಗೂ ಸಿಬ್ಬಂದಿ ಕಾರ್ಯ ಪ್ರವೃತ್ತರಾಗಬೇಕು ಎಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಡಾ.ಕೆ.ಟಿ.ತಿಪ್ಪೇಸ್ವಾಮಿ ಅಭಿಮತ ವ್ಯಕ್ತಪಡಿಸಿದರು.

ನಗರದ ಡಿ.ಹೆಚ್.ಓ ಕಚೇರಿಯಲ್ಲಿ ಶುಕ್ರವಾರ ಚಿತ್ರದುರ್ಗ ತಾಲ್ಲೂಕಿನ ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರಗಳ ವೈದ್ಯಾಧಿಕಾರಿ ಮತ್ತು ಕ್ಷೇತ್ರ ಮಟ್ಟದಲ್ಲಿ ಕಾರ್ಯ ನಿರ್ವಹಿಸುವ ಆರೋಗ್ಯ ಸುರಕ್ಷತಾಧಿಕಾರಿ ಮತ್ತು ಆರೋಗ್ಯ ನಿರೀಕ್ಷಣಾಧಿಕಾರಿಗಳ ಪ್ರಗತಿ ಪರಿಶೀಲಾನ ಸಭೆ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬಾಲ್ಯ ವಿವಾಹ ತಡೆಗಟ್ಟುವಿಕೆ, ಮಕ್ಕಳ ಹಕ್ಕು ರಕ್ಷಣೆ, ಭ್ರೂಣ ಲಿಂಗ ಪತ್ತೆ ತಡೆ, ಬಾಲ ಕಾರ್ಮಿಕ ಪದ್ದತಿ ನಿಷೇಧ ಕಾಯ್ದೆಗಳು ತುಂಬಾ ಕಠಿಣವಾಗಿವೆ. ಇವುಗಳನ್ನು ಸರಿಯಾದ ರೀತಿಯಲ್ಲಿ ಅನುಷ್ಠಾನಕ್ಕೆ ತಂದರೆ, ಮಕ್ಕಳಿಗೆ ಸೂಕ್ತ ರಕ್ಷಣೆ ದೊರಕುವುದರೊಂದಿಗೆ ಅವರ ಭವಿಷ್ಯ ಉಜ್ವಲವಾಗುತ್ತದೆ. ಈ ಕಾಯ್ದೆಗಳನ್ನು ಸರಿಯಾದ ರೀತಿಯಲ್ಲಿ ಅರ್ಥಮಾಡಿಕೊಂಡು ಅಧಿಕಾರಿಗಳು ಅನುಷ್ಠಾನ ಮಾಡುವಂತೆ ಡಾ.ಕೆ.ಟಿ.ತಿಪ್ಪೇಸ್ವಾಮಿ ತಿಳಿಸಿದರು.



ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಅಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್ ಮಾತನಾಡಿ, ಬಾಲ ಕಾರ್ಮಿಕ ಪದ್ಧತಿ ತಡೆದು ಮಕ್ಕಳನ್ನು ಶಾಲೆಗೆ ಸೇರಿಸಿ ವಿದ್ಯೆ ಕೊಡಿಸಿ, ಇದಕ್ಕಾಗಿ ಸರ್ಕಾರದ ಹಲವಾರು ಯೋಜನೆಗಳ ಉಪಯೋಗ ಪಡೆಯಬಹುದಾಗಿದೆ ಎಂದರು.

ಜಿಲ್ಲಾ ಆರ್.ಸಿ.ಹೆಚ್. ಅಧಿಕಾರಿ ಡಾ.ಅಭಿನವ್ ಮಾತನಾಡಿ ಇತ್ತೀಚಿನ ದಿನಗಳಲ್ಲಿ ಬಾಲಕಿಯರ ಗರ್ಭಧಾರಣೆಯ ಕಂಡು ಬರುತ್ತಿದ್ದು, ಗ್ರಾಮ ಗ್ರಾಮಗಳಲ್ಲಿ ತಾಯಂದಿರ ಸಭೆ ಗ್ರಾಮಸಭೆ ಮತ್ತು ಗ್ರಾಮ ಆರೋಗ್ಯ ನೈರ್ಮಲ್ಯ ಪೌಷ್ಟಿಕ ಸಮಿತಿ ಸಭೆಗಳಲ್ಲಿ ಮಕ್ಕಳ ಹಕ್ಕು ರಕ್ಷಣೆ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸಿಲಾಗುತ್ತಿದೆ ಎಂದರು.

ಕಾರ್ಯಕ್ರಮದ ನಂತರ ಮಕ್ಕಳ ಆಯೋಗದ ಸದಸ್ಯ ಕೆ.ಟಿ.ತಿಪ್ಪೇಸ್ವಾಮಿ ಸಾಯಿ ನಾರಾಯಣ ಖಾಸಗಿ ಆಸ್ಪತ್ರೆ ಭೇಟಿ ನೀಡಿ ಸದಸ್ಯರು ಭ್ರೂಣ ಲಿಂಗ ಪತ್ತೆ ಕಾಯ್ದೆ ಅನುಷ್ಠಾನದ ಪರಿಶೀಲನೆ ನಡೆಸಿ ಮಾರ್ಗದರ್ಶನ ನೀಡಿದರು. ಈ ಸಂದರ್ಭದಲ್ಲಿ ಜಿಲ್ಲಾ ಮಕ್ಕಳ ಹಕ್ಕುಗಳ ರಕ್ಷಣಾಧಿಕಾರಿ ಸವಿತ, ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿ ಡಾ.ರೇಖಾ, ಹನುಮಂತ ಗೌಡ ಪೂಜಾರ್, ಪುನೀತ್ ಉಪಸ್ಥಿತರಿದ್ದರು.

### ಶಿಕ್ಷಕರು ತಮ್ಮಲ್ಲಿರುವ ಜ್ಞಾನಸಂಪತ್ತನ್ನು ವಿದ್ಯಾರ್ಥಿಗಳ ಭವಿಷ್ಯಕ್ಕಾಗಿ ಸದುಪಯೋಗ ಪಡಿಸಿ



**ಚಳ್ಳಕೆರೆ:** ಪ್ರಸ್ತುತ ವರ್ಷದ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ನಿರೀಕ್ಷಿತ ಫಲಿತಾಂಶ ಬಾರದೆ ಇದ್ದರೂ ಸಹ ಕಡಿಮೆ ಏನು ಆಗಿಲ್ಲ. ಇತ್ತೀಚಿನ ದಿನಗಳಲ್ಲಿ ವಿದ್ಯಾರ್ಥಿಗಳು ಸಕರಾತ್ಮಕವಾಗಿ ಸ್ಪಂದಿಸದೇ ಇರುವುದು ಸಹ ಕಡಿಮೆ ಫಲಿತಾಂಶಕ್ಕೆ ಕಾರಣವಾಗಿದೆ. ಆದರೆ, ಶಿಕ್ಷಕರಾದ ತಾವೆಲ್ಲರೂ ಗುಣಾತ್ಮಕ ಶಿಕ್ಷಣ ನೀಡಿ ಶಿಕ್ಷಣ ಇಲಾಖೆಯ ಹಿರಿಮೆಯನ್ನು ಹೆಚ್ಚಿಸಬೇಕೆಂದು ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ತಿಳಿಸಿದರು.

ಅವರು, ಶುಕ್ರವಾರ ತಳಕು ಹೋಬಳಿ ಮಟ್ಟದ ನಲಿಕಲಿ ಶಿಕ್ಷಕರ ಒಂದು ದಿನದ ಕಾರ್ಯಗಾರವನ್ನು ತಳಕು ಎಸ್‌ಜೆಟಿ ಸರ್ಕಾರಿ ಪ್ರೌಢಶಾಲಾ ಆವರಣದಲ್ಲಿ ಉದ್ಘಾಟಿಸಿ ಮಾತನಾಡಿದರು. ಪ್ರಸ್ತುತ ವರ್ಷದ ಶಾಲಾ, ಕಾಲೇಜುಗಳು ಆರಂಭವಾದ ನಂತರ ತಳಕು ಹೋಬಳಿಯಲ್ಲಿ ನಲಿಕಲಿ ಶಿಕ್ಷಕರ ತರಬೇತಿ ಕಾರ್ಯಗಾರದ ಮೂಲಕ ನಮ್ಮ ಈ ವರ್ಷದ ಶಿಕ್ಷಣದ ಪ್ರಗತಿಗೆ ಮುನ್ನುಡಿಬರೆಯಲಾಗಿದೆ. ತಾವೆಲ್ಲರೂ ಸಾಕಷ್ಟು ವರ್ಷಗಳಿಂದ ಶಿಕ್ಷಕರಾಗಿ ಸೇವೆ ಮಾಡಿದ್ದೀರಿ, ಅಪಾರವಾದ ಜ್ಞಾನಸಂಪತ್ತು ನಿಮ್ಮಲ್ಲಿದೆ. ನಮ್ಮ ಶಿಕ್ಷಕರು ಯಾರಿಗೂ ಕಡಿಮೆ ಇಲ್ಲ, ಪ್ರತಿನಿತ್ಯ ಶಾಲೆಗೆ ಆಗಮಿಸಿ ನಿಮ್ಮ, ನಿಮ್ಮ ಜವಾಬ್ದಾರಿಯನ್ನು ಹೆಚ್ಚಿನ ಮಟ್ಟದಲ್ಲಿ ನಿಬಾಯಿಸಿ. ವಿದ್ಯಾರ್ಥಿಗಳ ಭವಿಷ್ಯಕ್ಕೆ ಭದ್ರವಾದ ಬುನಾದಿಯನ್ನು ಪ್ರಾರಂಭದಲ್ಲೇ ಹಾಕುವಂತೆ ಮನವಿ ಮಾಡಿದರು.

## ಪ್ರಮುಖ ಸುದ್ದಿ

### ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಯಿಂದ ಪ್ರಗತಿ ಪರಿಶೀಲನೆ

# ಬೀಜ, ಗೊಬ್ಬರಕ್ಕೆ ಕೊರತೆಯಾಗಬಾರದು; ಗುಂಜನ್ ಕೃಷ್ಣ

» **ದಾವಣಗೆರೆ**

ಪ್ರಸಕ್ತ ಸಾಲಿನ ಮುಂಗಾರು ಹಂಗಾಮು ಆರಂಭವಾಗಿದ್ದು ಬಿತ್ತನೆ ಬೀಜ, ರಸಗೊಬ್ಬರದ ಕೊರತೆಯಾಗದಂತೆ ನೋಡಿಕೊಳ್ಳಬೇಕೆಂದು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಗುಂಜನ್ ಕೃಷ್ಣ ಸೂಚನೆ ನೀಡಿದರು.

ಅವರು ಶುಕ್ರವಾರ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆದ ಜಿಲ್ಲಾ ಮಟ್ಟದ ವಿವಿಧ ಇಲಾಖೆ ಅಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮತನಾಡಿದರು. ರೈತರಿಗೆ ಗುಣಮಟ್ಟದ ಬಿತ್ತನೆ ಬೀಜ ಸಿಗಬೇಕು, ಇದರಿಂದ ಉತ್ತಮ ಇಳುವರು ಪಡೆಯಲು ಸಾಧ್ಯವಾಗಲಿದೆ. ಪೂರ್ವ ಮುಂಗಾರಿನಲ್ಲಿ ಕಡಿಮೆ ದಿನಗಳಲ್ಲಿ ಬರುವ ತರಕಾರಿ ಬೆಳೆಯಲು ಪ್ರೋತ್ಸಾಹಿಸಿ, ಜೊತೆಗೆ ದ್ವಿದಳ ಧಾನ್ಯ ಬೆಳೆಯಲು ಹೆಚ್ಚಿನ ಒತ್ತನ್ನು ನೀಡಬೇಕೆಂದರು. ಖಾತರಿಯಡಿ ಹೂ, ತರಕಾರಿ ಬೆಳೆಗಳಿಗೆ ಪ್ರೋತ್ಸಾಹ ನೀಡಲಾಗುತ್ತಿದ್ದು ತೋಟಗಾರಿಕೆ ಇಲಾಖೆಯಿಂದ ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ದೀರ್ಘಕಾಲೀನ ಹಾಗೂ ವಿಶೇಷವಾದ ಹಣ್ಣು, ತರಕಾರಿಗಳ ಬೆಳೆಗೆ ಒತ್ತುನೀಡಬೇಕೆಂದು ಸೂಚನೆ ನೀಡಿದರು.

ಸಾವಯವತರಕಾರಿಬೆಳೆಗೆಪ್ರೋತ್ಸಾಹಿಸಿ; ಜನರು ಆರೋಗ್ಯ ದೃಷ್ಟಿಯಿಂದ ಸಾವಯವ ಕೃಷಿಯಿಂದ ಮಾಡಲಾದ ಹಣ್ಣು, ತರಕಾರಿ, ಸೊಪ್ಪುಗಳನ್ನು ಬಳಸಲು ಇಷ್ಟಡುತ್ತಾರೆ. ಅದಕ್ಕಾಗಿ ಸಾವಯವ ಕೃಷಿಯಿಂದ ಬೆಳೆಯುವ ತೋಟಗಾರಿಕೆ, ಕೃಷಿಗೆ ಒತ್ತು ನೀಡಬೇಕು. ಸಾವಯವ ಮೂಲಕ ಬೆಳೆದ ಹಣ್ಣು, ತರಕಾರಿಗಳಿಗೆ ಗುಣಮಟ್ಟದ ದೃಢೀಕರಣದೊಂದಿಗೆ ಪ್ರಮಾಣಿಕರಿಸಿ ಮಾರುಕಟ್ಟೆ ಕಲ್ಪಿಸಿದಲ್ಲಿ ಇದಕ್ಕೆ ಸಾಕಷ್ಟು ಬೇಡಿಕೆ ಇದೆ. ರೈತರಿಗೆ ಇದರಿಂದ ಹೆಚ್ಚಿನ ಆದಾಯ ಬರುವಂತಾಗುತ್ತದೆ ಎಂದು ತೋಟಗಾರಿಕೆ, ಕೃಷಿ ಅಧಿಕಾರಿಗಳಿಗೆ ತಿಳಿಸಿದರು.




ಜಲಾನಯನ ಕಾಮಗಾರಿಗೆ ಒತ್ತು; ಖಾತರಿಯಡಿ ಜಲಸಂರಕ್ಷಣೆಗಾಗಿ ರೈತರ ಹೊಲಗಳಲ್ಲಿ ಬದು ನಿರ್ಮಾಣ, ಕೃಷಿ ಹೊಂಡ, ಚೆಕ್ ಡ್ಯಾಂ, ಇಂಗುಗುಂಡಿಗಳನ್ನು ನಿರ್ಮಾಣ ಮಾಡುವ ಅಂತರ್ಜಲ ಹೆಚ್ಚಳಕ್ಕೆ ಆದ್ಯತೆ ನೀಡಬೇಕು. ಮಳೆಗಾಲದಲ್ಲಿ ಹೆಚ್ಚು ನೀರು ನಿಲ್ಲುವಂತೆ, ಇಂಗುವಂತೆ ನೋಡಿಕೊಂಡಲ್ಲಿ ಬೇಸಿಗೆ ಎದುರಿಸಲು ಸಾಧ್ಯವಾಗಲಿದೆ ಎಂದರು.

ಈ ವೇಳೆ ಜಿಲ್ಲಾಧಿಕಾರಿ ಡಾ: ವೆಂಕಟೇಶ್ ಎಂ.ವಿ ಅವರು ಜಿಲ್ಲೆಯಲ್ಲಿ ಉಪಚಾರವಾಗದ 60 ಸಾವಿರ ಹೆಕ್ಟೇರ್ ಇದ್ದು ಈಗಾಗಲೇ 1.80 ಲಕ್ಷ ಹೆಕ್ಟೇರ್ ಉಪಚಾರವಾದ ಜಲಾನಯನ ಪ್ರದೇಶ ಜಿಲ್ಲೆಯಲ್ಲಿದೆ. ಖಾತರಿಯಡಿ ಇಂತಹ ಪ್ರದೇಶದಲ್ಲಿ ಈ ವರ್ಷ ಜಲಸಂರಕ್ಷಣಾ ಕಾಮಗಾರಿಗಳನ್ನು ತೆಗೆದುಕೊಳ್ಳಲು ಸೂಚನೆ ನೀಡಿದರು.

ಮಳೆನೀರು ಕೊಯ್ಲು; ಜಿಲ್ಲೆಯ ನಗರ, ಪಟ್ಟಣ ಪ್ರದೇಶದಲ್ಲಿ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಹೊಸ ಮನೆಗಳ ನಿರ್ಮಾಣಕ್ಕೆ ನೀಡುವ ಪರವಾನಗಿ ವೇಳೆ ಕಡ್ಡಾಯವಾಗಿ ಮಳೆ ನೀರುಕೊಯ್ಲು ಮಾಡಿಕೊಳ್ಳುವ ಷರತ್ತಿನೊಂದಿಗೆ ಅನುಮತಿ ನೀಡಬೇಕು. ಏಕೆಂದರೆ ಬೇಸಿಗೆಯಲ್ಲಿ ಈ ವರ್ಷ ನೀರಿನ ಸಮಸ್ಯೆ ಎದುರಿಸುವಂತಾಯಿತು. ಮಳೆ ನೀರು ಕೊಯ್ಲು ಮಾಡುವುದರಿಂದ ಬೇಸಿಗೆಯಲ್ಲಿ ಇದರ ಉಪಯೋಗವಾಗುವುದರಿಂದ ನೀರಿನ ಸಂಗ್ರಹವಾಗಿ ಜನರಿಗೆ ಉಪಯೋಗವಾಗಲಿದೆ ಎಂದರು.

ಕುಡಿಯುವ ನೀರು ಪರೀಕ್ಷೆ ಮಾಡಲು ಸೂಚನೆ; ಕಲುಷಿತ ಕುಡಿಯುವ ನೀರಿನ ಪೂರೈಕೆಯಿಂದ ಸಾಮೂಹಿಕವಾಗಿ ಅನಾರೋಗ್ಯದ ವರದಿಯು ರಾಜ್ಯದಲ್ಲಿ ಅಲ್ಲಲ್ಲಿ ಕಂಡು ಬಂದಿದ್ದು ಕುಡಿಯುವ ನೀರು ಪೂರೈಕೆ ಮಾಡುವ ಮೊದಲು ಕಡ್ಡಾಯವಾಗಿ ಪರೀಕ್ಷೆ ನಡೆಸಬೇಕು. ನೀರಿನ ಮೂಲ,ಪೈಪ್‌ಲೈನ್,ಟ್ಯಾಂಕ್‌ಗಳಲ್ಲಿನೀರನ್ನು ಕಾಲಕಾಲಕ್ಕೆ ಪರೀಕ್ಷೆ ಮಾಡಿದ ನಂತರವೇ ಪೂರೈಕೆ ಮಾಡಬೇಕು. ನಗರ, ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಆಯಾ ಸಂಸ್ಥೆಗಳ ಮುಖ್ಯಸ್ಥರ ಜವಾಬ್ದಾರಿಯಾಗಿರುತ್ತದೆ. ಮತ್ತು ಗ್ರಾಮಾಂತರ ಪ್ರದೇಶದಲ್ಲಿ ಪಂಚಾಯಿತಿ ಅಭಿವೃದ್ದಿ ಅಧಿಕಾರಿಗಳು, ಕಿರಿಯ ಇಂಜಿನಿಯರ್‌ಗಳು ನೀರಿನ ಪರೀಕ್ಷೆ ನಡೆಸಿ ಪೂರೈಕೆ ಮಾಡಬೇಕು. ನೀರಿನ ಪೂರೈಕೆಯಲ್ಲಿ ಕಲುಷಿತ ನೀರು ಪೂರೈಕೆಯಾದಲ್ಲಿ ಸ್ಥಳೀಯ ಅಧಿಕಾರಿಗಳನ್ನೆ ಹೊಣೆಗಾರರನ್ನಾಗಿ ಮಾಡಲಾಗುತ್ತದೆ ಎಂದ ಅವರು ಕುಡಿಯುವ ನೀರಿನ ಪೈಪ್‌ಲೈನ್ ಚರಂಡಿ ದಾಟಿ ಹೋಗುವಂತಿದ್ದಲ್ಲಿ ಪರಿಶೀಲನೆ ಮಾಡಿ ಬೇರೆಡೆ ಸ್ಥಳಾಂತರಿಸಿ ಸಂಪರ್ಕ ಕಲ್ಪಿಸಲು ಕ್ರಮ ಕೈಗೊಳ್ಳಬೇಕು, ಯಾವುದೇ ಕಾರಣಕ್ಕೂ ಚರಂಡಿಯೊಂದಿಗೆ ಕುಡಿಯುವ ನೀರಿನ ಪೈಪ್‌ಲೈನ್ ಇರಬಾರದು ಎಂದು ತಿಳಿಸಿದರು.

ಶುದ್ಧ ಕುಡಿಯುವ ನೀರು ಒದಗಿಸಿ; ಜಿಲ್ಲೆಯಲ್ಲಿ 799 ಶುದ್ದ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪಿಸಲಾಗಿದ್ದು ಇವುಗಳಲ್ಲಿ 761 ಕಾರ್ಯನಿರ್ವಹಿಸುತ್ತಿವೆ. 34 ಘಟಕಗಳಿಗೆ ನೀರಿನ ಪೂರೈಕೆ ಇಲ್ಲದ ಕಾರಣ ಮತ್ತು 4 ಇತರೆ ಕಾರಣದಿಂದ ಕಾರ್ಯನಿರ್ವಹಿಸುತ್ತಿಲ್ಲ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ.ಇಟ್ನಾಳ್ ತಿಳಿಸಿದಾಗ ಎಲ್ಲೆಲ್ಲಿ ಕುಡಿಯುವ ನೀರು ಯೋಗ್ಯವಲ್ಲ ಎಂದು ಪರೀಕ್ಷಾ ವರದಿಯಿಂದ ದೃಢಪಟ್ಟಿದೆ ಅಲ್ಲಿನ ಜನರು ಶುದ್ಧ ಕುಡಿಯುವ ನೀರಿನ ಘಟಕದಿಂದ ಪಡೆದ ನೀರನ್ನೆ ಕುಡಿಯಲು ಜಾಗೃತಿ ಮೂಡಿಸಬೇಕೆಂದು ಉಸ್ತುವಾರಿ ಕಾರ್ಯದರ್ಶಿಯವರು ತಿಳಿಸಿದರು.

ಸಮಸ್ಯಾತ್ಮಕ ಗ್ರಾಮಗಳಲ್ಲಿ ಕುಡಿಯವ ನೀರಿನ ಕಾಮಗಾರಿ; ಕಳೆದ ಬೇಸಿಗೆ ಸಂದರ್ಭದಲ್ಲಿ ಅಲ್ಲಿನ ಕೊಳವೆಬಾವಿಗಳು ವಿಫಲವಾಗಿ ಖಾಸಗಿ ಕೊಳವೆಬಾವಿಗಳ ಮೂಲಕ ನೀರು ಪೂರೈಕೆ ಮಾಡಿದ ಮತ್ತು ಟ್ಯಾಂಕರ್‌ಗಳ ಮೂಲಕ ನೀರು ಪೂರೈಕೆ ಮಾಡಿದ ಗ್ರಾಮಗಳಲ್ಲಿ ಆದ್ಯತೆಯೊಂದಿಗೆ ಹೊಸ ಕುಡಿಯುವ ನೀರಿನ ಪೂರೈಕೆ ಕಾಮಗಾರಿಗಳನ್ನು ತೆಗೆದುಕೊಳ್ಳಬೇಕೆಂದು ಜಿಲ್ಲಾಧಿಕಾರಿಯವರು ತಿಳಿಸಿದರು.

ಖಾತರಿಯಲ್ಲಿ 35 ಲಕ್ಷ ಮಾನವ ದಿನಗಳ ಗುರಿ; ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿಯಡಿ ಪ್ರಸಕ್ತ ವರ್ಷ 215.80 ಕೋಟಿ ಕಾರ್ಮಿಕ ಆಯವ್ಯಯ ಅಂದಾಜಿಸಲಾಗಿದ್ದು 35 ಲಕ್ಷ ಮಾನವ ದಿನಗಳ ಸೃಜನೆಯ ಗುರಿ ಹೊಂದಲಾಗಿದೆ. ಇಲ್ಲಿಯವರೆಗೆ 6.13 ಲಕ್ಷ ಮಾನವ ದಿನಗಳ ಸೃಜನೆ ಮಾಡಿ ರೂ.20.11 ಕೋಟಿ ಕೂಲಿ ಬಾಬ್ತು, ರೂ. 10.35 ಕೋಟಿ ಸಾಮಗ್ರಿ

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T